ಜನಮನದ ದನಿ
# ಪ್ರಜೋದಯ
ಸಂಪಾದಕ : ಜೆ.ಆರ್. ಕೆಂಚೇಗೌಡ




ಭಾರತ ವಿರುದ್ಧ ಅ. 29 ರಂದು ನಡೆಯಲಿರುವ ಟಿ-20 ಮೊದಲ ಪಂದ್ಯಕ್ಕೆ ಆಸ್ಟ್ರೇಲಿಯಾದ ಲೆಗ್ ಸ್ಪಿನ್ನರ್ ಆ್ಯಡಂ ಜಂಪಾ ಅಲಭ್ಯ

28 ಅಕ್ಟೋಬರ್ 2025 ಮಂಗಳವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 227 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629


ಕೃತಕ ಬುದ್ಧಿಮತ್ತೆಯ ಕಲಿಕೆ ಮಕ್ಕಳಲ್ಲಿ ನೈತಿಕ ಮೌಲ್ಯ ಬೆಳೆಸಬಲ್ಲದೇ ? » 2


ಶಾಂತಿ, ಸೌಹಾರ್ದ ಸಭೆ ನಡೆಸಲು ಸೂಚನೆ » 3


ಇಂದಿನಿಂದಲೇ ರಾಷ್ಟ್ರವ್ಯಾಪಿ ಎಸ್ಐಆರ್ ಆರಂಭ » 4

# ಹೈಕಮಾಂಡ್ ತೀರ್ಮಾನಿಸಿದ್ರೆ ನಾನೇ ಪೂರ್ಣಾವಧಿ ಸಿಎಂ

## ಮುಖ್ಯಮಂತ್ರಿ ಸ್ಥಾನ ಕೇಳುವ ಹಕ್ಕು ಎಲ್ಲರಿಗೂ ಇದೆ : ಸಿದ್ದರಾಮಯ್ಯ

• ಪ್ರಜೋದಯ ವರದಿ

**ಬೆಂಗಳೂರು:** ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ, ನವೆಂಬರ್ ಕ್ರಾಂತಿಯ ಬಗ್ಗೆ ವ್ಯಾಪಕ ಪರ-ವಿರೋಧ ಚರ್ಚೆಗಳು ನಡೆಯುತ್ತಿರುವ ಹೊತ್ತಿನಲ್ಲಿ ಹೈಕಮಾಂಡ್ ತೀರ್ಮಾನ ಮಾಡಿದರೆ ನಾನೇ ಪೂರ್ಣಾವಧಿ ಮುಖ್ಯಮಂತ್ರಿ ಎಂದು ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ಐದು ವರ್ಷ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಎಂಬ ಕೆ.ಎನ್.ರಾಜಣ್ಣ ಹೇಳಿಕೆಗೆ ಸೋಮವಾರ ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅದು ಅವರ ವೈಯಕ್ತಿಯ ಅಭಿಪ್ರಾಯ ಎಂದರು.

ಇದೇ ವೇಳೆ, ಕೆ.ಹೆಚ್. ಮುನಿಯಪ್ಪ, ಡಾ.ಜಿ.ಪರಮೇಶ್ವರ್, ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ರೇಸ್‌ನಲ್ಲಿರುವ ಕುರಿತ ಪ್ರಶ್ನೆಗೆ, ಪ್ರಜಾಪ್ರಭುತ್ವದಲ್ಲಿ ಸ್ಪರ್ಧೆಯಲ್ಲಿ ಇರುವವರನ್ನು ತಪ್ಪಿಸಲು ಆಗಲ್ಲ. ಸ್ಪರ್ಧೆಯಲ್ಲಿ ಇರಬೇಡಿ ಎಂದು ಹೇಳಲು ಆಗಲ್ಲ. ಪ್ರಜಾಪ್ರಭುತ್ವದಲ್ಲಿ ಕೇಳೋದು ಅವರ ಹಕ್ಕು. ಅಂತಿಮವಾಗಿ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಹೇಳುವ-ಕೇಳುವ ಹಕ್ಕು ಎಲ್ಲರಿಗೂ ಇದೆ ಎಂದು ತಿಳಿಸಿದರು.

ನಾಯಕತ್ವ ಬದಲಾವಣೆಯ ವಿಷಯ ಏಕೆ ನಿರಂತರವಾಗಿ ಹೊರ ಹೊಮ್ಮುತ್ತಿದೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ನೀವು (ಮಾಧ್ಯಮ) ಕೇಳುತ್ತಲೇ ಇರುವುದರಿಂದ ಈ ಪ್ರಶ್ನೆಗಳು ಉದ್ಭವಿಸುತ್ತಿವೆ ಎಂದು ಉತ್ತರಿಸಿದರು.

**ಬಿಹಾರ ಚುನಾವಣೆಯ ಬಳಿಕ ತೀರ್ಮಾನ**

ನಾಯಕತ್ವ ಬದಲಾವಣೆ ಅಥವಾ ಸಂಪುಟ ಪುನಾರಚನೆಯ ಅಗತ್ಯವಿದ್ದರೆ ಬಿಹಾರ ಚುನಾವಣೆಯ ಬಳಿಕ ಕಾಂಗ್ರೆಸ್ ಹೈಕಮಾಂಡ್ ತೀರ್ಮಾನ ಮಾಡಲಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಬದಲಾವಣೆ ಬಗ್ಗೆ ತೀರ್ಮಾನ ಕೈಗೊಳ್ಳುವುದು ಹೈಕಮಾಂಡ್. ನಾವು ಇಲ್ಲಿ ಕುಳಿತುಕೊಂಡು ತೀರ್ಮಾನ ಕೈಗೊಳ್ಳಲು ಆಗುವುದಿಲ್ಲ. ಅವಶ್ಯಕತೆ ಇದ್ದರೆ ಬಿಹಾರ ಚುನಾವಣೆ ನಂತರ ಹೈಕಮಾಂಡ್‌ನವರೇ ತೀರ್ಮಾನ ಮಾಡುತ್ತಾರೆ. ಪುನಾರಚನೆಯೋ?, ಎರಡೂವರೆ ವರ್ಷದ ನಂತರ ಅಧಿಕಾರ ಬದಲಾವಣೆಯೋ?, ಏನೇ ಇದ್ದರೂ ಹೈಕಮಾಂಡ್ ತೀರ್ಮಾನ ಮಾಡಲಿದೆ. ನಾವು ಇಲ್ಲಿ ಮಾತಾಡೋದರಿಂದ ಗೊಂದಲ ಆಗುತ್ತೆ.

» ನಾಲ್ಕನೇ ಪುಟದಲ್ಲಿ



### ಇಂದು ಸಚಿವರ ಜೊತೆ ಸಿಎಂ ಸಭೆ

ಇತ್ತೀಚೆಗೆ ಸಚಿವರ ಜೊತೆ ಡಿನ್ನರ್ ಮೀಟಿಂಗ್ ನಡೆಸಿದ್ದ ಸಿದ್ದರಾಮಯ್ಯ ಅವರು, ಇದೀಗ ಮತ್ತೊಂದು ಸಭೆಗೆ ಮುಂದಾಗಿದ್ದಾರೆ. ರಾಜ್ಯೋತ್ಸವ ಪ್ರಶಸ್ತಿ ಹೆಸರಲ್ಲಿ ಸಚಿವರಿಗೆ ಮುಖ್ಯಮಂತ್ರಿ ಬುಲಾವ್ ನೀಡಿದ್ದಾರೆ. ಮಂಗಳವಾರ ಸಭೆ ಕರೆದಿರುವ ಅವರು, ಸಚಿವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಮುಂದಾಗಿದ್ದಾರೆ. ಅಲ್ಲದೇ, ಅಹಿಂದ ನಾಯಕರು ಕೂಡ ಮತ್ತೊಂದು ಸುತ್ತಿನ ಸಭೆಗೆ ನಿರ್ಧರಿಸಿದ್ದಾರೆ ಎನ್ನಲಾಗಿದೆ. ಎರಡ್ಮೂರು ದಿನದಲ್ಲಿ ಸತೀಶ್ ಜಾರಕಿ ಹೊಳಿ, ಪರಮೇಶ್ವರ್, ಹೆಚ್.ಸಿ ಮಹದೇವಪ್ಪ ಸಭೆ ಸೇರುವ ಸಾಧ್ಯತೆ ಇದೆ ಎನ್ನಲಾಗಿದೆ.

### ನ.11ರಂದು ಡಿ.ಕೆ.ಶಿ, 15ರಂದು ಸಿಎಂ ದೆಹಲಿಗೆ

ನ.15ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಇದಕ್ಕೂ ಮುನ್ನ ನ.11ರಂದು ಮತ್ತೊಮ್ಮೆ ದೆಹಲಿಗೆ ಹಾರಲು ಡಿ.ಕೆ.ಶಿವಕುಮಾರ್ ಸಜ್ಜಾಗಿದ್ದಾರೆ. ಭಾನುವಾರ ಮಧ್ಯಾಹ್ನ ದೆಹಲಿಗೆ ಹೋಗಿದ್ದ ಡಿ.ಕೆ.ಶಿವಕುಮಾರ್ ಅವರು ರಾಹುಲ್ ಗಾಂಧಿ ಅವರನ್ನು ಭೇಟಿಯಾಗಲು ಸಾಧ್ಯವಾಗದೆ ಸೋಮವಾರ ವಾಪಾಸ್ಸಾಗಿದ್ದಾರೆ. ಹೀಗಾಗಿ ನ.11ರಂದು ರಾಹುಲ್ ಗಾಂಧಿ ಜೊತೆ ಪ್ರತ್ಯೇಕ ಮಾತುಕತೆ ನಡೆಸಲು ಸಮಯ ಕೇಳಿದ್ದಾರೆ.

## ಮಳೆ ಹಾನಿ ಪ್ರದೇಶಕ್ಕೆ ಶ್ರೇಯಸ್ ಭೇಟಿ



• ಪ್ರಜೋದಯ ವರದಿ

**ಅರಕಲಗೂಡು:** ನಿರಂತರ ಮಳೆಯಿಂದ ಹಾನಿಗೀಡಾದ ಸ್ಥಳಗಳಿಗೆ ಸಂಸದ ಶ್ರೇಯಸ್ ಪಟೇಲ್ ಅವರು ಸೋಮವಾರ ಭೇಟಿ ನೀಡಿ ಪರಿಶೀಲಿಸಿದರು.

ತಾಲ್ಲೂಕಿನ ಚೋಳೇನಹಳ್ಳಿ, ನೈಗೆರೆ, ಪಾರಸನಹಳ್ಳಿ, ಸೀಬಳ್ಳಿ ಹಾಗು ಕೊಣನೂರಿಗೆ ಭೇಟಿ ನೀಡಿದ ಅವರು, ಅನೇಕ ಕಡೆ ಕೆರೆ ಕೋಡಿ ಒಡೆದು ಜಮೀನಿಗೆ ನೀರು ನುಗ್ಗಿದೆ. ರಸ್ತೆಗಳೆಲ್ಲಾ ಜಲಾವೃತವಾಗಿ ಸಂಚಾರಕ್ಕೆ ಅಡಚಣೆಯಾಗಿದೆ. ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ವಹಿಸಬೇಕೆಂದು ಅಧಿಕಾರಿಗಳಿಗೆ ಹೇಳಿದರು.

ಅ.24ರ ಮಂಗಳವಾರ ಮನೆ ಗೋಡೆ ಕುಸಿದು ಮೃತಪಟ್ಟ ಮತ್ತಿಗೋಡು ಗ್ರಾಮದ ಜವರಮ್ಮ ಅವರ ಮನೆಗೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಮಲಗಿದ್ದಾಗಲೇ ಮನೆ ಗೋಡೆ ಕುಸಿದಿರುವುದು ನೋವಿನ ವಿಚಾರ. ಕುಟುಂಬಕ್ಕೆ ಸೂಕ್ತ ಪರಿಹಾರ ಕಲ್ಪಿಸುವುದರ ಜೊತೆಗೆ ಮನೆ ನಿರ್ಮಿಸಿಕೊಡಲು ಕ್ರಮ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಪಿ.ಶ್ರೀಧರ್ ಗೌಡ, ತಹಶೀಲ್ದಾರ್ ಸೌಮ್ಯ ಮತ್ತಿತರರಿದ್ದರು.

# ನ್ಯಾಯಯುತ ಪರಿಹಾರಕ್ಕಾಗಿ ರೈತರ ಬಿಗಿಪಟ್ಟು

**ಬೆಂಡೆಕೆರೆ ಬಳಿ ಕಾಮಗಾರಿಗೆ ಅಡ್ಡಿ | ಹೋರಾಟಗಾರರ ಮನವೊಲಿಸಿದ ಜಿಲ್ಲಾಧಿಕಾರಿ**

• ಪ್ರಜೋದಯ ವರದಿ

**ಅರಸೀಕೆರೆ:** ತಾಲ್ಲೂಕಿನಲ್ಲಿ ಹಾದು ಹೋಗಿರುವ ತುಮಕೂರು-ಶಿವಮೊಗ್ಗಾ ಸಂಪರ್ಕಿಸುವ ಚತುಷ್ಪಥ ರಾಷ್ಟ್ರೀಯ ಹೆದ್ದಾರಿ(206) ಕಾಮಗಾರಿಗೆ ಸ್ವಾಧೀನಪಡಿಸಿಕೊಳ್ಳಲು ಮುಂದಾಗಿರುವ ಭೂಮಿಗೆ ನ್ಯಾಯಯುತ ಪರಿಹಾರ ನೀಡಬೇಕೆಂದು ಆಗ್ರಹಿಸಿ ಸೋಮವಾರ ಭೂಮಾಲೀಕರು ಪ್ರತಿಭಟನೆ ನಡೆಸಿದರು.

ತಾಲ್ಲೂಕಿನ ಬೆಂಡೆಕೆರೆ ಗ್ರಾಮಕ್ಕೆ ಭಾರೀ ಪೊಲೀಸ್ ಭದ್ರತೆ ನಡುವೆ ಕಾಮಗಾರಿಗೆ ಮುಂದಾದಾಗ ಅಲ್ಲಿಗೆ ದೌಡಾಯಿಸಿದ 500ಕ್ಕೂ ಹೆಚ್ಚು ರೈತರು ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು. ಪ್ರತಿಭಟನೆ ವಿಚಾರ ತಿಳಿದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಭೇಟಿ ನೀಡಿ ಮಾತುಕತೆ ನಡೆಸಿದರು.

ಜೆಡಿಎಸ್ ಮುಖಂಡ ಎನ್.ಆರ್. ಸಂತೋಷ್ ಅವರು ಮಾತನಾಡಿ, ಭೂಮಿಗೆ ನ್ಯಾಯಯುತ ಪರಿಹಾರ ಕೇಳಿದರೆ ಪೊಲೀಸರ ಜೊತೆ ಬಂದಿದ್ದೀರಿ, ನೀವು ಒಂದು ಹೆಜ್ಜೆ ಮುಂದಿಟ್ಟರೆ, ನಾವು ಎರಡು ಹೆಜ್ಜೆ ಇಡುತ್ತೇವೆ. ರೈತರ ತಾಳ್ಮೆ ಪರೀಕ್ಷೆ ಮಾಡಬೇಡಿ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಲೋಕಸಭಾ ಸದಸ್ಯರಾಗಿದ್ದ ಪ್ರಜ್ವಲ್ ರೇವಣ್ಣ, ಮಾಜಿ ಸಚಿವ ಹೆಚ್.ಡಿ.ರೇವಣ್ಣ ಹಾಗು ಜಿಲ್ಲಾಧಿಕಾರಿ ಸಮಕ್ಷಮದಲ್ಲಿ ಕಳೆದ ವರ್ಷ ಸಭೆ ನಡೆಸಿ ಪ್ರತಿ ಗುಂಟೆ ಜಮೀನಿಗೆ 36 ಸಾವಿರ ರೂ. ಪರಿಹಾರ ನೀಡಲು ಒಪ್ಪಿಗೆ ನೀಡಲಾಗಿತ್ತು. ಈಗ ಕೇವಲ 11,232 ರೂ. ನೀಡುತ್ತಿರುವುದು ಸರಿಯಲ್ಲ. ನುಡಿದಂತೆ ನಡೆಯಬೇಕು, ಇಲ್ಲವೇ ಕೆಲಸ ನಿಲ್ಲಿಸಬೇಕು. ನ್ಯಾಯ ದೊರೆಯುವವರೆಗೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ. ಮುನ್ಸೂಚನೆ ನೀಡದೇ ಏಕಾಏಕಿ ಯಂತ್ರೋಪಕರಣಗಳೊಂದಿಗೆ ಲಗ್ಗೆ ಇಟ್ಟರೆ ನಾವು ಹೆದರುವುದಿಲ್ಲವೆಂದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಮಾತನಾಡಿ, ಬಲವಂತವಾಗಿ ಭೂಮಿ ಪಡೆಯುವ ಉದ್ದೇಶ ನಮ್ಮದಲ್ಲ. ಅಭಿವೃದ್ಧಿ ಕೆಲಸಗಳಿಗೆ ಅಡ್ಡಿ ಮಾಡುವುದರಿಂದ ಪ್ರಗತಿ ಕುಂಠಿತವಾಗುತ್ತದೆ. ನಿಮಗೆ ದೊರಕಬೇಕಿರುವ ಪರಿಹಾರ ನೀಡಲು

» ನಾಲ್ಕನೇ ಪುಟದಲ್ಲಿ

# ಜಿಲ್ಲಾಧಿಕಾರಿ ಮಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಲಿ

## ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬೆದರಿಕೆ | ಪ್ರಗತಿ ಪರಿಶೀಲನಾ ಸಭೆಯಲ್ಲಿ ಹೆಚ್.ಡಿ.ರೇವಣ್ಣ ಆರೋಪ

• ಪ್ರಜೋದಯ ವರದಿ

**ಹಾಸನ :** ಜಿಲ್ಲಾಧಿಕಾರಿ ನಗರ ಪ್ರದಕ್ಷಣೆ ಹಾಕುವ ಬದಲು ಮಳೆಯಿಂದ ಹಾನಿಗೀಡಾಗಿರುವ ಪ್ರದೇಶಗಳಿಗೆ ಭೇಟಿ ನೀಡಿ, ರೈತರಿಗೆ ಬೆಳೆ ಪರಿಹಾರ ನೀಡುವ ಕ್ರಮಕ್ಕೆ ಮುಂದಾಗಲಿ ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ತಿಳಿಸಿದರು.

ತಾಲ್ಲೂಕು ಕಚೇರಿಯಲ್ಲಿ ಸೋಮವಾರ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲಾಧಿಕಾರಿ ತಮ್ಮ ಕೆಳಗಿನ ಅಧಿಕಾರಿಗಳನ್ನು ಸರಿಯಾಗಿ ನಡೆಸಿಕೊಳ್ಳಬೇಕು. ಸ್ಥಳ ಬದಲಾವಣೆ ಮಾಡುವ ಮೂಲಕ ಕಿರುಕುಳ ನೀಡುತ್ತಿದ್ದಾರೆಂದು ಅಧಿಕಾರಿಗಳೇ ನನಗೆ ದೂರು ನೀಡಿದ್ದಾರೆ. ಕಾನೂನು ಬದ್ಧವಾಗಿ ಕೆಲಸ ಮಾಡುವ ಅಧಿಕಾರಿಗಳು ಭಯಪಡುವ ಅಗತ್ಯವಿಲ್ಲ. ನಾನು ನಿಮ್ಮೊಂದಿಗೆ ಇರುತ್ತೇನೆಂದು ಹೇಳಿದರು.

ನನ್ನ ಜೊತೆ ಬಂದಿದ್ದ ತಾಲ್ಲೂಕು ಸರ್ವೆಯರ್‌ಗೆ ನೋಟೀಸ್ ನೀಡುವುದಾಗಿ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಬೆದರಿಕೆ ಹಾಕಿದ್ದಾರೆ. ಶಾಸಕರ ಜೊತೆ ಅಧಿಕಾರಿಗಳು ಬರಬಾರದೇ, ಈ ಬಗ್ಗೆ ಸರ್ಕಾರದ



ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆಯುತ್ತೇನೆ. ನಾನು ಯಾರಿಗೂ ಹೆದರುವುದಿಲ್ಲ. ಜಿಲ್ಲಾಧಿಕಾರಿ ತಮ್ಮ ಮೇಜಿನ ಮೇಲಿರುವ ಕಡತಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲಿ. ಸಾಕಷ್ಟು ಕಡತಗಳು ಬಾಕಿ ಇದ್ದು, ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರ ಗಮನಕ್ಕೆ ತರುತ್ತೇನೆ. ಜಿಲ್ಲಾಧಿಕಾರಿಯಾಗಿ ಬಂದಾಗಿನಿಂದ ಎಷ್ಟು ಕಡತಗಳನ್ನು ವಿಲೇವಾರಿ ಮಾಡಿದ್ದಾರೆಂಬುದನ್ನು ಸ್ಪಷ್ಟಪಡಿಸಲಿ ಎಂದು ಅಸಮಾಧಾನ ವ್ಯಕ್ತಪಡಿಸಿದರು.

» ನಾಲ್ಕನೇ ಪುಟದಲ್ಲಿ

### ಅರಸೀಕೆರೆ ಗಣಪತಿ ವಿಸರ್ಜನಾ ಮಹೋತ್ಸವ

**ಅರಸೀಕೆರೆ :** ನಗರದ ಪ್ರಸನ್ನ ಗಣಪತಿ ಮೂರ್ತಿ ಅದ್ದೂರಿ ವಿಸರ್ಜನಾ ಮಹೋತ್ಸವ ಅ.31ರಂದು ನಡೆಯಲಿದೆ. ಅಂದು ಸಂಜೆ 6 ಗಂಟೆಗೆ ಉತ್ಸವ ವಿವಿಧ ಕಲಾ ತಂಡಗಳೊಂದಿಗೆ ನಡೆಯಲಿದೆ. ನ.1 ರಂದು ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಇದ್ದು, ನ.2ರಂದು ಸಂಜೆ 7 ಗಂಟೆಗೆ ಕಂತೇನಹಳ್ಳಿ ಕೆರೆಯಲ್ಲಿ ವಿಸರ್ಜನೆ ಮಾಡಲಾಗುವುದು.

### ಕಾರ್ಜುವಳ್ಳಿ ಶ್ರೀ ಜನ್ಮ ವರ್ಧಂತ್ಯುತ್ಸವ : ಇಂದು ಪೂರ್ವಭಾವಿ ಸಭೆ

• ಪ್ರಜೋದಯ ವರದಿ

**ಆಲೂರು:** ತಾಲ್ಲೂಕಿನ ಕಾರ್ಜುವಳ್ಳಿ ಮಠದ ಶ್ರೀ ಸದಾಶಿವ ಸ್ವಾಮೀಜಿ ಅವರ ಜನ್ಮ ವರ್ಧಂತ್ಯುತ್ಸವ ಡಿ. 19 ರಂದು ನೆರವೇರಲಿದೆ. ಆ ಹಿನ್ನಲೆಯಲ್ಲಿ ಅ. 28 ರಂದು ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ.

ಡಿಸೆಂಬರ್ 17ಕ್ಕೆ ಶ್ರೀಗಳು ಪಟ್ಟಾಧಿಕಾರ ವಹಿಸಿ ಐದು ವರ್ಷ ಪೂರ್ಣಗೊಳ್ಳುತ್ತದೆ. ಶ್ರೀಮಠದ ಪದ್ಧತಿಯಂತೆ ಡಿ. 16 ರಿಂದ 20ರ ವರೆಗೆ 5 ದಿನ ಧಾರ್ಮಿಕ-ಸಾಮಾಜಿಕ, ಸಾಂಸ್ಕೃತಿಕ ಕಾರ್ಯಕ್ರಮ ನೆರವೇರಲಿವೆ. ಈ ಕಾರ್ಯದ ಪ್ರಥಮ ಪೂರ್ವಭಾವಿ ಸಭೆ ಅ. 28ರ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ಶ್ರೀ ಮಠದ ಆವರಣದಲ್ಲಿ ನಡೆಯಲಿದೆ.

## ಮಹಿಳೆಯಿಂದ 3 ಕೋಟಿ ವಂಚನೆ : ರಸ್ತೆಯಲ್ಲೇ ಥಳಿತ

• ಪ್ರಜೋದಯ ವರದಿ

**ಹಾಸನ:** ಹಣ ದುಪ್ಪಟ್ಟು ಮಾಡಿಸುವುದಾಗಿ ನಂಬಿಸಿ ಹಲವರಿಂದ ಲಕ್ಷ ಲಕ್ಷ ಹಣ ಪಡೆದು, ಅಂದಾಜು 3 ಕೋ.ರೂ.ಗೂ ಅಧಿಕ ವಂಚನೆ ಮಾಡಿರುವ ಮಹಿಳೆಯನ್ನು ನಡು ರಸ್ತೆಯಲ್ಲೇ ಅಟ್ಟಾಡಿಸಿ ಹೊಡೆದ ಘಟನೆ ನಗರದ ಅರಳೇಪೇಟೆಯಲ್ಲಿ ನಡೆದಿದೆ.

ಅರಳೇಪೇಟೆಯಲ್ಲಿ ಟೈಲರ್ ಶಾಪ್ ನಡೆಸುತ್ತಿದ್ದ ಹೇಮಾವತಿ ಎಂಬ ಮಹಿಳೆ, ಹಣ ಹೂಡಿಕೆ ಮಾಡಿದರೆ ಕೆಲವೇ ದಿನಗಳಲ್ಲಿ ದುಪ್ಪಟ್ಟು ಹಣ ಬರುತ್ತದೆ ಎಂದು ನಂಬಿಸಿ ವಂಚನೆ ನಡೆಸಿದ್ದಾಳೆಂದು ಮಹಿಳೆಯರು ಹಿಗ್ಗಾಮುಗ್ಗಾ ಥಳಿಸಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಟೈಲರ್ ಶಾಪ್‌ಗೆ ಬರುತ್ತಿದ್ದ ಮಹಿಳೆಯರನ್ನು ಪರಿಚಯ ಮಾಡಿಕೊಳ್ಳುತ್ತಿದ್ದ ಹೇಮಾವತಿ, ತನ್ನ ಮಗಳನ್ನು



ವಿದೇಶದಲ್ಲಿ ಎಂ.ಎಸ್. ಓದಿಸಬೇಕು ಹಾಗು ಕೋ.ರೂ. ಮೊತ್ತದ ಮನೆ ಖರೀದಿಸಿದ್ದೇನೆಂದು ಹಾಗು ತಾನು ಕೊಡಚಾದ್ರಿ ಚಿಟ್ಸ್‌ನಲ್ಲಿ 1 ಕೋ.ರೂ.ಗೂ ಅಧಿಕ ಚೀಟಿ ಹಾಕಿದ್ದೇನೆ. ಕೆಲವೇ ತಿಂಗಳುಗಳಲ್ಲಿ ದುಪ್ಪಟ್ಟು ಹಣ ಬರಲಿದೆ ಎಂದು ನಕಲಿ ರಶೀದಿ ತೋರಿಸಿ ಪರಿಚಯಸ್ಥ ಮಹಿಳೆಯರ ಬಳಿ ಸಾಲ ಕೇಳುತ್ತಿದ್ದಳು. ಅಲ್ಲದೇ ಹಣ ಹೂಡಿಕೆ ಮಾಡಿಸುತ್ತಿದ್ದಳು.

ಹೇಮಾವತಿಯ ಮಾತಿಗೆ ಮರುಳಾಗಿದ್ದ ಮಹಿಳೆಯರು ತಮ್ಮ ಚಿನ್ನವನ್ನು ಅಡವಿಟ್ಟು ಲಕ್ಷಾಂತರ ಹಣವನ್ನು ಆಕೆಗೆ ನೀಡಿದ್ದರು.

ಹತ್ತಾರು ವರ್ಷಗಳಿಂದ ಟೈಲರ್ ಶಾಪ್ ನಡೆಸುತ್ತಿದ್ದ ಆಕೆ, ನಿತ್ಯ ಗ್ರಾಹಕರನ್ನೇ ಗುರಿಯಾಗಿಸಿಕೊಂಡು, ಅವರಿಂದ ಹಣ ಪಡೆದು ವಂಚನೆ ಮಾಡಿದ್ದಾಳೆಂದು ನಗರ ಠಾಣೆ, ಪೆನ್ಷನ್ ಮೊಹಲ್ಲಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ. ಒಬ್ಬ ಮಹಿಳೆಯಿಂದಲೇ ಸುಮಾರು 45 ಲ.ರೂ. ಹಣ ಪಡೆದು ವಂಚನೆ ನಡೆಸಿದ್ದಾಳೆಂಬ ಆರೋಪವೂ ಕೇಳಿಬಂದಿದೆ.

**ವಂಚನೆಗೆ ಪತಿಯೂ ಸಾಥ್**

ವಂಚನೆಗೆ ಹೇಮಾವತಿಯ ಪತಿ ವಿರೂಪಾಕ್ಷಪ್ಪ ಸಹಭಾಗಿಯಾಗಿದ್ದಾನೆಂಬ ಆರೋಪವೂ ಕೇಳಿಬಂದಿದೆ. ಪೊಲೀಸರು ಇಬ್ಬರನ್ನೂ ವಿಚಾರಣೆಗಾಗಿ ಕರೆದಿದ್ದು, ನೊಂದ ಮಹಿಳೆಯರು ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

**ಗಾಜಿನ ಗ್ಲಾಸ್ ಒಡೆದ ಕೈ ಸದಸ್ಯರು | ಮೂಕ ಪ್ರೇಕ್ಷಕರಾದ ಶಾಸಕ ಸುರೇಶ್**

# ಗೊಂದಲದ ಗೂಡಾದ ಬೇಲೂರು ಪುರಸಭೆ ಸಾಮಾನ್ಯ ಸಭೆ

• ಪ್ರಜೋದಯ ವರದಿ

**ಬೇಲೂರು:** ಪುರಸಭೆಯ ವೇಲಾಪುರಿ ಸಭಾಂಗಣದಲ್ಲಿ ಸೋಮವಾರ ನಡೆದ ಸಾಮಾನ್ಯ ಸಭೆಯು ಕಾಂಗ್ರೆಸ್ ಸದಸ್ಯರ ಪರಸ್ಪರ ಆರೋಪ-ಪ್ರತ್ಯಾರೋಪಗಳಿಂದ ಗೊಂದಲದ ಗೂಡಾಗಿ ಮಾರ್ಪಟ್ಟಿತು.

ಸದಸ್ಯರ ಗಲಾಟೆಗೆ ಶಾಸಕ ಹೆಚ್.ಕೆ.ಸುರೇಶ್ ಮೂಕ ಪ್ರೇಕ್ಷಕರಾದರು. ಪುರಸಭೆ ಮಾಜಿ ಅಧ್ಯಕ್ಷ ಎ.ಆರ್. ಅಶೋಕ್ ವಿರುದ್ಧ ಮುಗಿಬಿದ್ದ ಸ್ವಪಕ್ಷದ ಶಾಸಕರು ಗಾಜಿನ ಗ್ಲಾಸ್ ಒಡೆದು ಹಾಕಿದರು. ಅಪದ್ಧ ಮಾತುಗಳು ಜೋರಾಗಿ ಸಭೆಯ ಔಚಿತ್ಯವೇ ಮಣ್ಣುಪಾಲಾಯಿತು.

**ಅಶೋಕ್ ವಿರುದ್ಧ ವಾಗ್ದಾಳಿ**

ಸಭೆ ಆರಂಭವಾಗುತ್ತಿದ್ದ ಎ.ಆರ್. ಅಶೋಕ್ ಅವರು ಪುರಸಭೆ ಮಾಜಿ ಅಧ್ಯಕ್ಷ ಸಿ.ಎನ್.ದಾನಿ ಅವರು ಹಾಸನ ರಸ್ತೆಯಲ್ಲಿ ನಿರ್ಮಿಸುತ್ತಿರುವ ಕಟ್ಟಡ ಕಾಮಗಾರಿ ಪೂರ್ಣಗೊಳ್ಳದೆ



ಇ-ಸ್ವತ್ತು ಕೊಟ್ಟಿದ್ದು ಏಕೆಂದು ಪ್ರಶ್ನಿಸಿದರು. ಅದಕ್ಕೆ ವಿರೋಧ ವ್ಯಕ್ತಪಡಿಸಿದ ಸದಸ್ಯರಾದ ಸಿ.ಎನ್.ದಾನಿ, ಶಾಂತಕುಮಾರ್ ಮತ್ತಿತರರು ಗಲಾಟೆ ಶುರು ಮಾಡಿದರು. ಶಾಸಕ ಹೆಚ್.ಕೆ. ಸುರೇಶ್ ಮತ್ತು ಪುರಸಭೆ ಅಧ್ಯಕ್ಷೆ ಉಷಾ ಸತೀಶ್ ಅವರ ಮಧ್ಯಸ್ಥಿಕೆಯಿಂದ ಪರಿಸ್ಥಿತಿ ನಿಯಂತ್ರಣಕ್ಕೆ ಬಂದಿತು.

**ಸಹಕಾರ ಸಿಕ್ಕರಷ್ಟೇ ಅಭಿವೃದ್ಧಿ**

ಸಭೆ ಉದ್ದೇಶಿಸಿ ಮಾತನಾಡಿದ ಶಾಸಕ ಹೆಚ್.ಕೆ.ಸುರೇಶ್ ಅವರು, ಎಲ್ಲಾ ಸದಸ್ಯರ ಒಗ್ಗಟ್ಟು ಹಾಗು ಅಭಿವೃದ್ಧಿಗೆ ಬೆಂಬಲ ನೀಡಿದರೆ ಮಾತ್ರ ಪಟ್ಟಣ ಅಭಿವೃದ್ಧಿ ಹೊಂದಲು ಸಾಧ್ಯ. ವೈಯಕ್ತಿಕ ಹಿತಾಸಕ್ತಿಗೆ ಒಬ್ಬರ ಮೇಲೊಬ್ಬರು ಆರೋಪ ಮಾಡುವ ಬದಲು ಮತ ನೀಡಿರುವ ಜನರಿಗೆ ಅನುಕೂಲವಾಗುವತ್ತ ಚಿತ್ತ ಹರಿಸಬೇಕೆಂದರು.

ತಾಲ್ಲೂಕಿನಲ್ಲಿ ಭ್ರಷ್ಟಾಚಾರವನ್ನು ಬುಡ ಸಮೇತ ಕಿತ್ತು ಹಾಕುವ ಸಂಕಲ್ಪ ಮಾಡಿದ್ದೇನೆ. ಕರ್ತವ್ಯ ಲೋಪ ಎಸಗುವ ಅಧಿಕಾರಿಗಳನ್ನು ನೇರವಾಗಿ ಖಂಡಿಸುತ್ತೇನೆ. ನನಗೆ ಸಾರ್ವಜನಿಕರ ಹಿತ ಮುಖ್ಯ. ಭ್ರಷ್ಟಾಚಾರದಲ್ಲಿ ಯಾರೇ ಭಾಗಿಯಾಗಿದ್ದರೂ ಅವರನ್ನು ನಾನು ಮಟ್ಟ ಹಾಕದೆ ಬಿಡುವುದಿಲ್ಲ. ಪುರಸಭೆಯಲ್ಲಿ ಭ್ರಷ್ಟಾಚಾರ ಆಗಿದ್ದರೆ ಲೋಕಾಯುಕ್ತಕ್ಕೆ ದೂರು ಸಲ್ಲಿಸಲು ನಾನು ಬದ್ಧನೆಂದರು.

ಸದಸ್ಯ ಶಾಂತಕುಮಾರ್ ಅವರು ಮಾತನಾಡಿ, ಇತ್ತೀಚೆಗೆ ಪುರಸಭೆಯಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ. ಖಾತೆ ಬದಲಾವಣೆ ಹೆಸರಿನಲ್ಲಿ ಅಧಿಕಾರಿಗಳು ಲೂಟಿ ಹೊಡೆಯುತ್ತಿದ್ದಾರೆ. ಪುರಸಭೆ ವ್ಯಾಪ್ತಿಯ ಸರ್ಕಾರಿ ಜಾಗವನ್ನು ಖಾತೆ ಮಾಡಿಕೊಳ್ಳುವುದರ ಜೊತೆಗೆ ಅಕ್ರಮ ಖಾತೆ ಹಾಗು ಬೇಕಾಬಿಟ್ಟಿ ಕಂದಾಯ ವಸೂಲಿ ಮಾಡುತ್ತಿರುವುದರಿಂದ ಪುರಸಭೆ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿದೆ. ಅಲ್ಲದೆ ಯಾವ ಜಿಲ್ಲೆಯಲ್ಲೂ ಇರದ ಕಂದಾಯದ ಬರೆ ಇಲ್ಲಿ ಬಡವರ್ಗದವರ ಮೇಲೆ ಹೇರುತ್ತಿರುವುದು ಎಷ್ಟರ ಮಟ್ಟಿಗೆ ಸರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

» ನಾಲ್ಕನೇ ಪುಟದಲ್ಲಿ



## 100 ರೂಪಾಯಿಗಾಗಿ ಕುಡುಗೋಲಿನಿಂದ ಪತ್ನಿ ಮೇಲೆ ಹಲ್ಲೆ

• ಪ್ರಜೋದಯ ವರದಿ

**ಅರಕಲಗೂಡು:** ಮದ್ಯ ಸೇವಿಸಲು 100 ರೂ. ಕೊಡಲಿಲ್ಲವೆಂದು ಮದ್ಯವ್ಯಸನಿ ಪತಿಯು ಪತ್ನಿ ಮೇಲೆ ಕುಡುಗೋಲಿನಿಂದ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ತಾಲ್ಲೂಕಿನ ದಡದಹಳ್ಳಿಯಲ್ಲಿ ನಡೆದಿದೆ.

ಗ್ರಾಮದ ಚನ್ನಾಜಮ್ಮ ಗಾಯಾಳು. ಚಂದ್ರ ಎಂಬಾತ ಭಾನುವಾರ ಹಲ್ಲೆ ನಡೆಸಿದ್ದು ಗಂಭೀರ ಗಾಯಗೊಂಡಿರುವ ಮಹಿಳೆಯನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ.

ಜಮೀನಿನಲ್ಲಿ ಜೋಳ ಮುರಿಯುತ್ತಿದ್ದಾಗ ಅಲ್ಲಿಗೆ ಬಂದ ಚಂದ್ರ, ಮದ್ಯ ಸೇವಿಸಲು 100 ರೂ. ಕೊಡುವಂತೆ ಕೇಳಿದ್ದಾನೆ. 100 ರೂ. ಕೊಟ್ಟ ಬಳಿಕ ಮತ್ತೆ 100 ರೂ. ಕೊಡಬೇಕೆಂದು ಹಠ ಹಿಡಿದಿದ್ದಾನೆ. ಅದಕ್ಕೆ ಮಹಿಳೆ ಒಪ್ಪದೇ ಇದ್ದರಿಂದ ಅಲ್ಲೇ ಬಿದ್ದಿದ್ದ ಕುಡುಗೋಲನ್ನು ತೆಗೆದು ಕೊಂಡು ಕುತ್ತಿಗೆ, ಎರಡೂ ಕಿವಿ, ಕಣ್ಣು, ಬಾಯಿಯ ಹತ್ತಿರ, ಕೈಗಳಿಗೆ ಕುಡುಗೋಲಿನಿಂದ ಕೊಚ್ಚಿದ್ದಾನೆ. ಅಲ್ಲೇ ಇದ್ದ ಚನ್ನಾಜಮ್ಮ ಅವರ ತಾಯಿ ಶಿವಮ್ಮ ಹಾಗು ಇತರರು ಜಗಳ ಬಿಡಿಸಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಶಾಂತಿ, ಸೌಹಾರ್ದ ಸಭೆ ನಡೆಸಲು ಸೂಚನೆ

• ಪ್ರಜೋದಯ ವರದಿ




**ಹಾಸನ:** ಗ್ರಾಮಗಳಲ್ಲಿ ಶಾಂತಿ ಮತ್ತು ಸೌಹಾರ್ದ ಸಭೆ ನಡೆಸಲು ನಿಗದಿತ ವೇಳಾಪಟ್ಟಿ ಸಿದ್ಧಪಡಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ ಅವರು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ (ದೌರ್ಜನ್ಯ ನಿಯಂತ್ರಣ) ನಿಯಮಗಳಡಿ ನಡೆದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ತ್ರೈಮಾಸಿಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಿವಿಧ ಇಲಾಖೆಗಳು ಜಂಟಿಯಾಗಿ ಸಭೆ ನಡೆಸುವುದರಿಂದ ಸ್ಥಳೀಯ ಸಮಸ್ಯೆ ಪರಿಹಾರಕ್ಕೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್ ಅವರು ಮಾತನಾಡಿ, ಕಾಡಾಂಚಿನಲ್ಲಿ ವಾಸವಿರುವ ಹಲಸರು, ಮಲೆರು, ಮಲೈಕುಡಿ ಜನಾಂಗದವರು ಅರಣ್ಯ ಪ್ರದೇಶದಲ್ಲಿ ಕಿರು ಉತ್ಪನ್ನ ಸಂಗ್ರಹಿಸಲು ಅವಕಾಶ ಕಲ್ಪಿಸಲು ಅರಣ್ಯ ಇಲಾಖೆ ಅಧಿಕಾರಿಗಳು ಕ್ರಮವಹಿಸಬೇಕು. ಶೆಟ್ಟಿಹಳ್ಳಿ ರಸ್ತೆ ಬದಿಗಳಲ್ಲಿ ಹಳೆಯ ಮರಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವಂತೆ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಅಕ್ರಮವಾಗಿ ದಿನಸಿ ಅಂಗಡಿಗಳಲ್ಲಿಯೂ ಮದ್ಯ ಮಾರಾಟ ಮಾಡುವುದು ಹಾಗೂ ಮದ್ಯದ ಅಂಗಡಿಗಳನ್ನು ನಿಗದಿತ ಸಮಯಕ್ಕಿಂತ ಮೊದಲೇ ತೆರೆದು ಮಾರಾಟ ಮಾಡುವುದು ಕಂಡು ಬರುತ್ತಿದೆ ಎಂದು ಸಮಿತಿಯ ಸದಸ್ಯರು ಸಭೆಯ ಗಮನಕ್ಕೆ ತಂದ ಹಿನ್ನಲೆಯಲ್ಲಿ ಅಪರ ಜಿಲ್ಲಾಧಿಕಾರಿ ಅವರು ಕ್ರಮ ಕೈಗೊಳ್ಳುವಂತೆ ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಸಣ್ಣ ನೀರಾವರಿ ಇಲಾಖೆಯಿಂದ ಈಗಾಗಲೇ ಕೊರೆದಿರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ, ಈಗಾಗಲೇ ಭೂ ಮಂಜೂರಾಗಿರುವುದಕ್ಕೆ ಖಾತೆ ಮಾಡಿಕೊಡುವುದು, ಪೌರ ಕಾರ್ಮಿಕರಿಗೆ ಮನೆ ನಿರ್ಮಿಸಿಕೊಡುವುದು, ಸಿಟಿ ಬಸ್‌ಸ್ಟಾಂಡ್ ಬಳಿ ನಗರಸಭೆಯಿಂದ ನಿರ್ಮಾಣ ಮಾಡಿರುವ ಅಂಗಡಿ ಮಳಿಗೆಗಳಲ್ಲಿ ಪರಿಶಿಷ್ಟ ಜಾತಿಗೆ ಮೀಸಲಿಡುವಂತೆ, ಆದರ್ಶ ಗ್ರಾಮ ಯೋಜನೆಯಡಿ ವಿದ್ಯುತ್ ದೀಪ ಅಳವಡಿಕೆ, ಕಾಫಿ ಲೈನ್ ಮನೆಗಳಲ್ಲಿ ವಾಸ ಮಾಡುವ ಕಾರ್ಮಿಕರಿಗೆ ಗಿರಿಜನ ಉಪಯೋಜನೆಯಡಿ ನಿವೇಶನ ಒದಗಿಸುವುದು, ಗುಡ್ಡೇನಹಳ್ಳಿ ಗ್ರಾಮದಲ್ಲಿ ಕುಲುವಾಡಿಕೆ ಜಮೀನನ್ನು ಇತರೆ ವರ್ಗದವರಿಗೆ ಖಾತೆ ಮಾಡಿ ಕೊಡದಂತೆ ಕ್ರಮವಹಿಸಲು, ಕಾರ್ಲೆ ಗ್ರಾಮದಲ್ಲಿ ಸ್ಮಶಾನ ಒತ್ತುವರಿ ತೆರವು ಮತ್ತಿತರ ವಿಷಯಗಳ ಕುರಿತು ಸಮಿತಿ ಸದಸ್ಯರಾದ ಮಲ್ಲೇಶ್, ಮರಿಜೋಸೆಫ್, ಶಿವಮ್ಮ, ನವೀನ್ ಸದಾ, ಶಿವಪ್ಪ ನಾಯಕ್ ಅವರು ಮಾತನಾಡಿ ಸಭೆಯಲ್ಲಿ ಚರ್ಚಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ಸಕಲೇಶಪುರ ಉಪ ವಿಭಾಗದ ಉಪ ವಿಭಾಗಾಧಿಕಾರಿ ರಾಜೇಶ್, ಡಿವೈಎಸ್‌ಪಿ ಗಂಗಾಧರಪ್ಪ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ದೂದ್ ಫೀರ್ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಬಡ ಮಕ್ಕಳಿಗೂ ಪ್ರತಿಭಾ ಪುರಸ್ಕಾರ ಅಗತ್ಯ

• ಪ್ರಜೋದಯ ವರದಿ



**ಹಾಸನ:** ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸುವುದರ ಜೊತೆಗೆ, ಉನ್ನತ ವಿದ್ಯಾಭ್ಯಾಸ ಮಾಡುತ್ತಿರುವ ಬಡ ಮಕ್ಕಳಿಗೂ ಸಹ ಪ್ರತಿಭಾ ಪುರಸ್ಕಾರ ನೀಡುವುದು ಅಗತ್ಯವೆಂದು ಶಾಸಕ ಹೆಚ್.ಪಿ. ಸ್ವರೂಪ್ ಅವರು ಹೇಳಿದರು.

ನಗರದ ಜಿಲ್ಲಾ ನಿವೃತ್ತ ನೌಕರರ ಸಮುದಾಯ ಭವನದಲ್ಲಿ ಸೋಮವಾರ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ, ಪ್ರತಿಭಾ ಪುರಸ್ಕಾರ ಮತ್ತು ಮಾಜಿ ಶಾಸಕ ದಿ|| ಹೆಚ್.ಎಸ್. ಪ್ರಕಾಶ್‌ರವರ ಭಾವಚಿತ್ರ ಅನಾವರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನನ್ನ ತಂದೆಯ ನೆನೆಸಿಕೊಂಡು ಅವರ ಭಾವಚಿತ್ರವನ್ನು ಅನಾವರಣಗೊಳಿಸಿರುವುದು ಮಗನಾಗಿ ನನಗೆ ಬಹಳ ಸಂತೋಷವಾಗುತ್ತಿದೆ ಎಂದರು.

ಕಳೆದ ಎರಡು ವರ್ಷಗಳ ಹಿಂದೆ ಶಾಸಕನಾಗಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ಬಂದಾಗ ಕಟ್ಟಡ ದುಸ್ಥಿತಿಯಲ್ಲಿದೆ ಅದನ್ನು ಸರಿಪಡಿಸಿ ಕೊಡಬೇಕೆಂದು ಕೆಲವು ಬೇಡಿಕೆಗಳನ್ನು ಇಟ್ಟಿದ್ದರು. ಅದನ್ನು ಖಂಡಿತವಾಗಿಯೂ ಸರಿಪಡಿಸಿ ಕೊಡುವಂತಹ ಕೆಲಸವನ್ನು ಮಾಡುತ್ತೇನೆ ಎಂದರು.

## ಆರ್‌ಎಸ್‌ಎಸ್ ಪಂಥ ಸಂಚಲನ: ಇಂದು ಶಾಂತಿ ಸಭೆ

**ಕಲಬುರಗಿ:** ಜಿಲ್ಲೆಯ ಚಿತ್ತಾಪುರದಲ್ಲಿ ನ.2ರಂದು ಪಥಸಂಚಲನ ಪ್ರತಿಭಟನೆ ನಡೆಸಲು ಉದ್ದೇಶಿಸಿರುವ ಸಂಘಟನೆಗಳೊಂದಿಗೆ ಅ.28ರಂದು ಶಾಂತಿ ಸಭೆ ನಡೆಯಲಿದ್ದು, ಹಾಜರಾಗುವಂತೆ 10 ಸಂಘಟನೆಗಳಿಗೆಜಿಲ್ಲಾಡಳಿತ ನೋಟೀಸ್ ನೀಡಿದೆ. ಈ ಸಂಬಂಧ ಜಿಲ್ಲಾಧಿಕಾರಿ ಹೈಕೋರ್ಟ್‌ನ ಕಲಬುರಗಿ ಪೀಠಕ್ಕೆ ಸಲ್ಲಿಸಿದ ವರದಿ ಪ್ರಕಾರ ಹಾಗು ವಿಚಾರಣೆ ವೇಳೆ ಹೈಕೋರ್ಟ್ ನೀಡಿದ ಆದೇಶದಂತೆ ಬೆಳಿಗ್ಗೆ 11.30ಕ್ಕೆ ಶಾಂತಿ ಸಭೆ ನಿಗದಿಪಡಿಸಲಾಗಿದೆ ಎಂದು ತಿಳಿಸಲಾಗಿದೆ.

## ಸಾಧಕರ ಸನ್ಮಾನಕ್ಕೆ ಅರ್ಜಿ ಆಹ್ವಾನ

• ಪ್ರಜೋದಯ ವರದಿ

**ಹಾಸನ:** ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರಿಗೆ ನ.1 ರಂದು ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸನ್ಮಾನಿಸಲು ಜಿಲ್ಲಾಡಳಿತದ ವತಿಯಿಂದ ತೀರ್ಮಾನಿಸಲಾಗಿದೆ.

ನಾಡು, ನುಡಿ, ಕಲೆ, ಸಾಹಿತ್ಯ, ಸಾಂಸ್ಕೃತಿಕ ಕ್ಷೇತ್ರ, ಪತ್ರಿಕಾ ಕ್ಷೇತ್ರ, ಕ್ರೀಡಾ ಕ್ಷೇತ್ರ ಮತ್ತು ಗ್ರಾಮೀಣ ಕಲೆ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರು ಅಥವಾ ಸಾಧಕರ ಬಗ್ಗೆ ಮಾಹಿತಿ ಹೊಂದಿರುವ ವ್ಯಕ್ತಿಗಳು ಸಾಧಕರ ಮಾಹಿತಿಯನ್ನು ಕರಾರು ವಕ್ಕಾದ ವಿಳಾಸ, ದೂ. ಸಂಖ್ಯೆ ಹಾಗೂ ಅರ್ಜಿ ಸಲ್ಲಿಸುತ್ತಿರುವ ಕ್ಷೇತ್ರದ ಬಗ್ಗೆ ಸ್ಪಷ್ಟವಾಗಿ ನಮೂದಿಸಿ ಅಗತ್ಯ ದೃಢೀ ಕೃತ ದಾಖಲೆಗಳನ್ನು ದಿನಾಂಕ ಅ.30 ರಂದು ಮಧ್ಯಾಹ್ನ 12ರೊಳಗೆ ಸಹಾಯಕ ಆಯುಕ್ತರು, ಹಾಸನ ಉಪ ವಿಭಾಗ ಹಾಸನ ಇವರ ಕಚೇರಿಗೆ ಸಲ್ಲಿಸಬಹುದಾಗಿದೆ. ಈ ಹಿಂದೆ ಸನ್ಮಾನ ಪಡೆದುಕೊಂಡಿರುವ ಸಾಧಕರು ಮರು ಅರ್ಜಿ ಸಲ್ಲಿಸಲುಅವಕಾಶವಿರುವುದಿಲ್ಲವೆಂದು ಉಪ ವಿಭಾಗಾಧಿಕಾರಿ ತಿಳಿಸಿದ್ದಾರೆ.

## ಅ.30 ರಂದು ನೇರ ಸಂದರ್ಶನ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಹಾಸನ ಮತ್ತು ಆರ್‌ಬಿಎಲ್ ಫಿನ್‌ಸರ್ವ್ ಲಿಮಿಟೆಡ್ (RBL Fin-Serve Limited) ಹಾಗೂ ಟೀಮ್ ಲೀಸ್ ಸರ್ವೀಸಸ್ ಲಿಮಿಟೆಡ್ (TeamLease Services Limited) ಸಂಸ್ಥೆಯ ಸಹ ಭಾಗಿತ್ವದಲ್ಲಿ ಉದ್ಯೋಗ ನೀಡುವ ಸಂಬಂಧ ಅ.30 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ರೈಲ್ವೆ ಸ್ಟೇಷನ್ ಹತ್ತಿರ, ಸರ್ಕಾರಿ ಐಟಿಐ ಕಾಲೇಜು ಆವರಣ, ಹಾಸನ ಇಲ್ಲಿ ನೇರ ಸಂದರ್ಶನ ನಡೆಯಲಿದ್ದು, ಎಸ್‌ಎಸ್‌ಎಲ್‌ಸಿ, ಐಟಿಐ, ಡಿಪ್ಲೋಮಾ, ಪಿಯುಸಿ, ಯಾವುದೇ ಪದವಿ ಪಾಸಾದ ಪುರುಷ-ಮಹಿಳಾ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗ ವಹಿಸಿ ಇದರ ಸದುಪಯೋಗ ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

ದೂ.ಸಂಖ್ಯೆ : 08172-296374, 9743144950 ಹಾಗೂ 87226 06874, ರವರನ್ನು ಕಚೇರಿ ವೇಳೆಯಲ್ಲಿ ಮಾತ್ರ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

# ವಿಶ್ವಕಪ್ ನೌಕೌಟ್ ಪಂದ್ಯಗಳಿಂದ ರಾವಲ್ ಹೊರಕ್ಕೆ

• ಪ್ರಜೋದಯ ವರದಿ




**ಮುಂಬೈ:** ಭಾರತ ಮಹಿಳಾ ಕ್ರಿಕೆಟ್ ತಂಡದ ಆರಂಭಿಕ ಬ್ಯಾಟರ್ ಪ್ರತೀಕಾ ರಾವಲ್ ಐಸಿಸಿ ಮಹಿಳಾ ಏಕದಿನ ವಿಶ್ವಕಪ್‌ನ ಮುಂದಿನ ಪಂದ್ಯಗಳಿಂದ ಹೊರಬಿದ್ದಿದ್ದಾರೆ. ಅವರು ಬಾಂಗ್ಲಾದೇಶ ವಿರುದ್ಧದ ಪಂದ್ಯದಲ್ಲಿ ಮೊಣಕಾಲು ಹಾಗೂ ಪಾದದ ಗಾಯಕ್ಕೆ ಒಳಗಾಗಿದ್ದರು.

ಡಿ.ವೈ.ಪಾಟೀಲ್ ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಭಾರತದ ಕೊನೆಯ ಲೀಗ್ ಪಂದ್ಯದ ವೇಳೆ ಪ್ರತೀಕಾ ರಾವಲ್ ಬಲಗಾಲಿನ ಪಾದದ ಗಾಯಕ್ಕೆ ಒಳಗಾಗಿದ್ದರು. ಪ್ರತೀಕಾ ರಾವಲ್ ಬಿದ್ದ ರೀತಿ ನೋಡಿದರೆ ಅವರು ಐಸಿಸಿ ಮಹಿಳಾ ಏಕದಿನ ವಿಶ್ವಕಪ್‌ನ ನಾಕೌಟ್ ಪಂದ್ಯಗಳಿಗೆ ಲಭ್ಯವಿರುವುದಿಲ್ಲ ಎಂಬುದು ಸ್ಪಷ್ಟವಾಗಿತ್ತು. ಇದು ದುರದೃಷ್ಟಕರ ಎಂದು ಬಿಸಿಸಿಐ ತಿಳಿಸಿದೆ.

ಡೀಪ್ ಮಿಡ್ ವಿಕೆಟ್ ವಿಭಾಗದಲ್ಲಿ ಕ್ಷೇತ್ರ ರಕ್ಷಣೆ ಮಾಡುತ್ತಿದ್ದ ರಾವಲ್, 21ನೇ ಓವರ್‌ನ ಕೊನೆಯ ಎಸೆತದಲ್ಲಿ ಚೆಂಡನ್ನು ತಡೆಯಲು ಮುಂದಾದಾಗ ಅವರ ಬಲಗಾಲು ಹುಲ್ಲು ಗಾವಲಿನಲ್ಲಿ ಸಿಲುಕಿಕೊಂಡು ಕೆಳಗೆ ಬೀಳುತ್ತಾರೆ. ತಕ್ಷಣಕ್ಕೆ ಮುಗುಳು ನಕ್ಕರಾದರೂ ಅವರು ಗಂಭೀರವಾಗಿ ಗಾಯಗೊಂಡಿರುವುದು ಸ್ಪಷ್ಟವಾಗಿತ್ತು.

ಅವರಿಗಾಗಿ ಮೈದಾನಕ್ಕೆ ಸ್ಟ್ರೆಚರ್ ತರಲು ಮುಂದಾದಾಗ ರಾವಲ್ ಸಹಾಯಕ ಸಿಬ್ಬಂದಿ ನೆರವು ಪಡೆದು ಮೈದಾನದಿಂದ ಹೊರನಡೆದಿದ್ದರು. ಮಹಿಳಾ ವಿಶ್ವಕಪ್ 2025ರಲ್ಲಿ ರಾವಲ್ ಅಮೋಘ ಲಯದಲ್ಲಿದ್ದು, ಆಡಿರುವ 6 ಇನಿಂಗ್ಸ್‌ಗಳಿಂದ 51.33 ಸರಾಸರಿಯಲ್ಲಿ 308 ರನ್‌ಗಳನ್ನು ಗಳಿಸಿದ್ದಾರೆ.

ರಿಚಾ ಘೋಷ್ ಅವರ ಫಿಟ್‌ನೆಸ್ ಬಗ್ಗೆಯೂ ಅನುಮಾನಗಳಿವೆ. ವಿಕೆಟ್ ಕೀಪರ್ ಬ್ಯಾಟರ್ ನ್ಯೂಜಿಲೆಂಡ್ ವಿರುದ್ಧದ ಪಂದ್ಯದಲ್ಲಿ ಬೆರಳಿಗೆ ಗಾಯಕ್ಕೆ ಒಳಗಾಗಿ ಬಾಂಗ್ಲಾದೇಶ ಪಂದ್ಯದಿಂದ ಹೊರಗುಳಿದಿದ್ದರು.

# ಸಾಧನೆಗೆ ಸಿದ್ದತೆ, ಬದ್ದತೆ ಅಗತ್ಯ: ಡಾ.ಕೆ.ಎಸ್.ಮುನಿಸ್ವಾಮಿಗೌಡ

• ಪ್ರಜೋದಯ ವರದಿ



**ಹಾಸನ:** ಸಾಧನೆಗೆ ಸಿದ್ದತೆ, ಬದ್ಧತೆ, ಹೋರಾಟ, ಪ್ರೀತಿ ಇರಬೇಕು, ಆಗ ಮಾತ್ರ ನೀವು ಸಾಧಿಸಲು ಸಾಧ್ಯವೆಂದು ಕೃಷಿ ಮಹಾವಿದ್ಯಾಲಯದ ಡೀನ್ ಡಾ.ಕೆ.ಎಸ್.ಮುನಿಸ್ವಾಮಿಗೌಡ ಅವರು ತಿಳಿಸಿದ್ದಾರೆ.

ನಗರದ ಹೊರವಲಯದ ಕಾರೆಕೆರೆ ಗ್ರಾಮದಲ್ಲಿರುವ ಕೃಷಿ ಮಹಾವಿದ್ಯಾಲಯದಲ್ಲಿ ಭಾನುವಾರ ಆಯೋಜಿಸಲಾಗಿದ್ದ 2025-26ನೇ ಸಾಲಿನ ಕೃಷಿ ಪದವಿ ಶಿಕ್ಷಣಕ್ಕೆ ಪ್ರವೇಶ ಪಡೆದಿರುವ ನೂತನ ವಿದ್ಯಾರ್ಥಿಗಳಿಗೆ ಸ್ನಾತಕ ಪದವಿಗಳ ಪರಿಚಯ ದೀಕ್ಷಾರಂಭ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದ ಅವರು, ಪರಿಪೂರ್ಣ ವ್ಯಕ್ತಿಯಾಗಲು ಆತ್ಮವಿಶ್ವಾಸ ಇರಬೇಕು. ಮೊಬೈಲ್ ಬಿಟ್ಟು ಒಳ್ಳೆಯ ಪುಸ್ತಕ ಓದಿ. ಮಾನಸಿಕ ಹಾಗೂ ದೈಹಿಕ ಆರೋಗ್ಯ ಕಾಪಾಡಿಕೊಳ್ಳಿ. ನಿತ್ಯ ವ್ಯಾಯಾಮ ಮಾಡಿ ದೇಹ ದಂಡಿಸಿದರೆ ಮನಸ್ಸು ಪ್ರಫುಲ್ಲವಾಗುತ್ತದೆಂದು ಹೇಳಿದ್ದಾರೆ.

ಪ್ರಸ್ತುತ ಆಹಾರ, ನೀರು, ರಾಸಾಯನಿಕ ಬಳಕೆಯಿಂದ ಕಲುಷಿತವಾಗಿದೆ. ಆದ ಕಾರಣ ಜಂಕ್ ಆಹಾರ ಬಿಟ್ಟು ಒಳ್ಳೆಯ ಆಹಾರ ಸೇವಿಸಿ ಆರೋಗ್ಯ ಕಾಪಾಡಿಕೊಳ್ಳಿ ಎಂದು ಸಲಹೆ ಮಾಡಿದರಲ್ಲದೆ, ಕೃಷಿ ಪದವಿಯನ್ನು ನೀವು ಆಯ್ಕೆ ಮಾಡಿಕೊಂಡಿರುವುದು ಅತ್ಯುತ್ತಮವಾಗಿದೆ. ಬೇರಾವುದೇ ಪದವಿಗೆ ಕೃಷಿ ಪದವಿ ಹೋಲಿಕೆ ಮಾಡಿದರೆ ಈ ಪದವಿಗೆ ವಿಶಾಲವಾದ ಉದ್ಯೋಗಾವಕಾಶ ಇದೆ. ಕೃಷಿ ಆಧಾರಿತ ಉದ್ದಿಮೆ ಸ್ಥಾಪನೆ ಮಾಡುವುದು ಮಾತ್ರವಲ್ಲದೆ, ವೈಜ್ಞಾನಿಕವಾಗಿ ಮುಂದುವರೆಯಲು ವಿಪುಲ ಅವಕಾಶಗಳಿವೆ ಎಂದರು.

ವೇದಿಕೆಯಲ್ಲಿ ಮಹಾವಿದ್ಯಾಲಯದ ವಿವಿಧ ವಿಭಾಗಗಳ ಮುಖ್ಯಸ್ಥರಾದ ಡಾ. ಬೈರಪ್ಪನವರ್, ಡಾ.ಕೃಷ್ಣ ಪ್ರಸಾದ್, ಡಾ.ವಿಶ್ವನಾಥ್ ಅಂಗಡಿ, ಡಾ.ನಟರಾಜ್, ಡಾ.ಕಣವಿ, ಡಾ.ಪ್ರಕಾಶ್, ಡಾ.ಶಶಿಕಿರಣ್, ಸಹಾಯಕ ಕುಲಸಚಿವ ಶಿವಶಂಕರ್, ಅಸಿಸ್ಟೆಂಟ್ ಕಂಟ್ರೋಲರ್ ನಾಗೇಂದ್ರಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

## ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆಗೆ ಎನ್.ಜಿ.ಓ ಸಂಸ್ಥೆಗಳಿಂದ ಅರ್ಜಿ ಆಹ್ವಾನ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ 2025-26 ನೇ ಸಾಲಿಗೆ ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ನಡೆಸಲು ಆಸಕ್ತಿಯುಳ್ಳ ಅನುಭವುಳ್ಳ ಅರ್ಹ ಸ್ವಯಂ ಸೇವಾ ಸಂಸ್ಥೆಗಳಿಗೆ (ಎನ್.ಜಿ.ಓ) ಆಸಕ್ತ ಅಭಿವ್ಯಕ್ತಿ ಸ್ವ-ಇಚ್ಛೆ (Expression of Interest) ಅರ್ಜಿಯನ್ನು ಆಹ್ವಾನಿಸಿದ್ದು, ಅರ್ಹ ಸ್ವಯಂ ಸೇವಾ ಸಂಸ್ಥೆಗಳಿಂದ Expression of Interest ಅನ್ನು ನ.15ರ ಸಂಜೆ 4.30ರ ವರೆಗೆ ಕರೆಯಲಾಗಿದೆ.

ಹೆಚ್ಚಿನ ಮಾಹಿತಿಗಾಗಿ https://kppp.karnataka.gov.in/ ಅಲ್ಲಿ ನೋಡಬಹುದಾಗಿದೆ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿಗಳ ಕಚೇರಿ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಹಾಸನ, ಮೊಬೈಲ್ ಸಂಖ್ಯೆ :-9449105880/ 9422598246, ವಿಳಾಸ: dbcshassan@gmail.com ಸಂಪರ್ಕಿಸಲು ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

## ಸಿಐಟಿಯು 16ನೇ ರಾಜ್ಯ ಸಮ್ಮೇಳನ : ಸದಸ್ಯರಿಂದ ನಿಧಿ ಸಂಗ್ರಹ ಜಾಥಾ




• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ನವೆಂಬರ್‌ನಲ್ಲಿ ಹಾಸನದಲ್ಲಿ ನಡೆಯುವ ಸಿಐಟಿಯುನ 16ನೇ ರಾಜ್ಯ ಸಮ್ಮೇಳನದ ಯಶಸ್ಸಿಗೆ ಸಾರ್ವಜನಿಕರ ಸಹಾಯ ಕೋರಿ ಭಾನುವಾರ ತಾಲ್ಲೂಕಿನ ಹಿರೀಸಾವೆಯಲ್ಲಿ ಸಿಐಟಿಯು ಸದಸ್ಯರು ನಿಧಿ ಸಂಗ್ರಹ ಜಾಥಾ ನಡೆಸಿದರು.

ತಾಲ್ಲೂಕಿನ ಹಿರೀಸಾವೆ ಗ್ರಾಮದ ಶ್ರೀಕಂಠಯ್ಯ ವೃತ್ತದ ಚೌಡೇಶ್ವರಿ ಮಹಾದ್ವಾರದ ಬಳಿ ಯಿಂದ ಮೆರವಣಿಗೆ ಪ್ರಾರಂಭವಾಗಿ ಶ್ರವಣಬೆಳಗೊಳ ರಸ್ತೆ, ಬಿ.ಎಂ.ರಸ್ತೆ, ಗ್ರಾಮ ಪಂಚಾಯಿತಿ ರಸ್ತೆ ಸೇರಿ ವಿವಿಧ ಬೀದಿಗಳಲ್ಲಿ ಸಾಗಿತು.

ನ.13ರಿಂದ 15ರವರೆಗೆ ಮೂರು ದಿನಗಳ ರಾಜ್ಯ ಸಮ್ಮೇಳನ ಹಾಸನದ ಡಾ.ಅಂಬೇಡ್ಕರ್ ಭವನದಲ್ಲಿ ನಡೆಯಲಿದ್ದು, ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಅಂಗನವಾಡಿ, ಗ್ರಾಮ ಪಂಚಾಯಿತಿ, ಬಿಸಿಯೂಟ, ವಿದ್ಯಾರ್ಥಿನಿಲಯ, ಆಸ್ಪತ್ರೆಗಳು ಮತ್ತು ಖಾಸಗಿ ಕಂಪನಿಯಲ್ಲಿ ಹೊರಗುತ್ತಿಗೆಯಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿ ಮತ್ತು ವಿವಿಧ ಅಸಂಘಟಿತ ಕಾರ್ಮಿಕರು ಮತ್ತು ಸಂಘಗಳ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ. ಸಮ್ಮೇಳನದ ಯಶಸ್ವಿಗೆ ಹೆಚ್ಚಿನ ಆರ್ಥಿಕ ಸಹಾಯ ಮಾಡುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಲಾಗುತ್ತಿದೆಂದು ಸಿಐಟಿಯು ಹಿರೀಸಾವೆ ಹೋಬಳಿ ಘಟಕದ ಅಧ್ಯಕ್ಷ ಜಯಶಂಕರ್ ಹೇಳಿದರು.

ಜಾಥಾದ ನೇತೃತ್ವವನ್ನು ಹೋಬಳಿಯ ಗ್ರಾಮ ಪಂಚಾಯಿತಿ ಸಿಬ್ಬಂದಿ ವಹಿಸಿದ್ದರು. ಜಿಲ್ಲಾ ಮತ್ತು ತಾಲ್ಲೂಕಿನ ಸಿಐಟಿಯು ಸಂಘಟನೆಯ ಪದಾಧಿಕಾರಿಗಳು ಭಾಗವಹಿಸಿದ್ದರು.

# ದೇಶಿಯ ಕ್ರೀಡೆಗೆ ಮಹತ್ವ ನೀಡಬೇಕು: ಪುಷ್ಪಗಿರಿ ಸ್ವಾಮೀಜಿ

• ಪ್ರಜೋದಯ ವರದಿ



**ಹಳೇಬೀಡು:** ಹುಟ್ಟು ಆಕಸ್ಮಿಕ, ಸಾವು ಖಚಿತ. ಮನುಷ್ಯ ಹುಟ್ಟಿದ ಮೇಲೆ ಸಮಾಜಕ್ಕೆ ನನ್ನ ಕೊಡುಗೆ ಏನು ಎಂಬುದನ್ನು ಹಾಕಿಕೊಳ್ಳಬೇಕೆಂದು ಪುಷ್ಪಗಿರಿ ಮಹಾ ಸಂಸ್ಥಾನ ಮಠದ ಶ್ರೀ ಸೋಮಶೇಖರ ಶಿವಾಚಾರ್ಯರ ಸ್ವಾಮೀಜಿ ಅವರು ತಿಳಿಸಿದರು.

ಹಳೇಬೀಡಿನಲ್ಲಿ ಕೆ.ಪಿ.ಎಸ್. ಆವರಣದಲ್ಲಿ ಹೊಯ್ಸಳ ಕ್ಲಬ್ ವತಿಯಿಂದ ದಿ|| ಪತ್ರಕರ್ತ ಹೆಚ್.ಜಿ.ಅನಂತ ರಾಮುರವರ ನೂತನ ಕ್ರೀಡಾಂಗಣದಲ್ಲಿ 2ನೇ ವರ್ಷದ ರಾಜ್ಯಮಟ್ಟದ ಮುಕ್ತ ಪುರುಷರ ಖೋ-ಖೋ ಪಂದ್ಯಾವಳಿ ಉದ್ಘಾಟಿಸಿ ಮಾತನಾಡಿದ ಅವರು, ಖೋ-ಖೋ ಕ್ರೀಡೆ ಭಾರತ ದೇಶದ ಪ್ರಮುಖ ಗ್ರಾಮಾಂತರ ಕ್ರೀಡೆಯಾಗಿದ್ದು, ಈ ಕ್ರೀಡೆಯಲ್ಲಿ ಮನುಷ್ಯ ನಿಗೆ ಹಲವಾರು ಜೀವನದಲ್ಲಿ ಗುರಿ ತಲುಪುವುದು, ಜೀವನಕ್ಕೆ ಇನ್ನೊಬ್ಬರ ಸಹಾಯ ಇದ್ದರೆ ಜೀವನದಲ್ಲಿ ಮುಂದೆ ಬರುವುದು, ಸುಮ್ಮನೆ ಕೂತರೆ ಜೀವನದಲ್ಲಿ ಮುಂದೆ ಬರುವುದಿಲ್ಲ, ಎದ್ದರೆ ತಮ್ಮ ಗುರಿಯನ್ನು ತಲುಪುವುದು ಸಾಧ್ಯ. ಎದುರಾಳಿಯನ್ನು ಸೋಲಿಸುವುದು ಜೀವ ನದ ಪ್ರಮುಖ ಪಾಠ ಈ ಖೋ-ಖೋ ಕ್ರೀಡೆ ಎಂದರು.

ಹಿರಿಯ ಪತ್ರಕರ್ತರು ದಿ|| ಅನಂತ ರಾಮು ಕ್ರೀಡಾಂಗಣಕ್ಕೆ ಹೆಸರು ಇಟ್ಟಿರೋದು ತುಂಬಾ ಒಳ್ಳೆಯ ವಿಚಾರ. ಗ್ರಾಮಾಂತರ ಪ್ರದೇಶದಲ್ಲಿ ಹುಟ್ಟಿ ಇಲ್ಲಿನ ಸಮಾಜ ಸೇವೆ, ನಿರಂತರ ಹೋರಾಟದಲ್ಲಿ ಭಾಗವಹಿಸಿದ ಮಹಾನ್ ವ್ಯಕ್ತಿ ಅವರು ಇಂದು ನಮ್ಮೊಂದಿಗೆ ಇಲ್ಲ ಆದರೂ ಅವರ ಹೆಸರು ಶಾಶ್ವತವಾಗಿ ಈ ಸ್ಥಳದಲ್ಲಿ ಇರಬೇಕು. ಕ್ರೀಡಾಂಗಣವನ್ನು ಶಾಶ್ವತವಾಗಿ ಉಳಿಸಿ ಬೆಳೆಸಿ ಎಂದು ತಿಳಿಸಿದರು.

ನಿವೃತ್ತ ಉಪ ಪ್ರಾಂಶುಪಾಲ ಮುಳ್ಳಯ್ಯ ಅವರು ಮಾತನಾಡಿ, ಈ ಹೊಯ್ಸಳ ಸ್ಪೋರ್ಟ್ಸ್ ಕ್ಲಬ್ ಯುವಕರು ನನ್ನ ಹಳೆಯ ವಿದ್ಯಾರ್ಥಿಗಳು. ಅವರಗೆ ಕ್ರೀಡೆಯಲ್ಲಿ ಹೆಚ್ಚಿನ ಆಸಕ್ತಿ ಇದ್ದು, ಇಂದಿನ ದಿನದಲ್ಲಿ ಒಳ್ಳೆಯ ಹುದ್ದೆಯಲ್ಲಿ ಇದ್ದಾರೆ. ಖೋ-ಖೋ ಕ್ರೀಡಾಂಗಣಕ್ಕೆ ಸ್ಥಳ ಅವಕಾಶ ಕೇಳಿಕೊಂಡರು ಅದಕ್ಕೆ ಸರ್ಕಾರದ ನಿಯಮದ ಪ್ರಕಾರ ಪತ್ರ ವ್ಯವಹಾರವನ್ನು ಮಾಡಿ ಸರ್ಕಾರದ ಆದೇಶದ ಮೇರೆಗೆ ಈ ಸ್ಥಳದಲ್ಲಿ ದಿ|| ಪತ್ರಕರ್ತ ಅನಂತರಾಮು ಹೆಸರನ್ನು ಇಟ್ಟಿದ್ದೇವೆ. ಈ ಶಾಲೆಗೆ ಹಲವಾರು ಅಭಿವೃದ್ಧಿ, ವಿದ್ಯಾರ್ಥಿಗಳ ದಾಖಲಾತಿಗೆ ಹೆಚ್ಚು ಮಹತ್ವ ನೀಡಿದಾರೆಂದು ತಿಳಿಸಿದರು.

ಹೊಯ್ಸಳ ಸ್ಪೋರ್ಟ್ಸ್ ಕ್ಲಬ್ ಖಜಾಂಚಿ ಪುನೀತ್ ಮಾತನಾಡಿ, ನಾವು 2ನೇ ವರ್ಷದ ರಾಜ್ಯ ಮಟ್ಟದ ಮುಕ್ತ ಖೋ-ಖೋ ಪಂದ್ಯಕ್ಕೆ ರಾಜ್ಯ ಮಟ್ಟದಿಂದ ಸುಮಾರು 10 ರಿಂದ 12 ತಂಡಗಳು ಬಂದಿದೆ. ಇನ್ನು ಹೆಚ್ಚಿನ ಸಂಖ್ಯೆಯಲ್ಲಿ ಬರಬೇಕಾಗಿತ್ತು ಮಳೆಯ ವಾತಾವರಣದಿಂದ ಕೆಲವರು ಹಿಂದೇಟು ಹಾಕಿದ್ದಾರೆ. ಕಾರ್ಯಕ್ರಮಕ್ಕೆ ಪುಷ್ಪಗಿರಿ ಶ್ರೀಗಳು ಬಂದು ಉದ್ಘಾಟಿಸಿ ನಮಗೆ ಹೆಚ್ಚಿನ ಸಹಕಾರ ಮತ್ತು ಮಾರ್ಗದರ್ಶನ, ಆಶೀರ್ವಾದ ನೀಡಿದಾರೆಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಮಧು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ತಾಲ್ಲೂಕು ಪತ್ರಕರ್ತ ಸಂಘದ ಅಧ್ಯಕ್ಷ ಹಳೇಬೀಡು ರಘುನಾಥ, ಗ್ರಾಮ ಪಂಚಾಯಿತಿ ಸದಸ್ಯ ಮೋಹನ್, ಡಾ||ಎಂ.ಸಿ. ಕುಮಾರ್, ಶಂಕರ್‌ನಾಗ್, ದೈಹಿಕ ಶಿಕ್ಷಕರಾದ ಮಹೇಶ್, ಚಂದ್ರೇಗೌಡ, ಜಗದೀಶ್, ನಿವೃತ್ತಿ ದೈಹಿಕ ಶಿಕ್ಷಕ ದೂಳುಬಾ, ಶಶಿಧರ್, ಸುರೇಶ್ ನಾಯಕ್, ಕ್ಲಬ್‌ನ ಪುನೀತ್, ಧರ್ಮೇಶ್, ಮಹೇಶ್, ತೀರ್ಥೇಶ್, ಕುಶ ಹಾಜರಿದ್ದರು.

## ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

• ಪ್ರಜೋದಯ ವರದಿ

**ಹಾಸನ:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಹಾಸನ ನಗರ ಉಪವಿಭಾಗ ವ್ಯಾಪ್ತಿಯಲ್ಲಿ 11 ಕೆ.ವಿ. ರಿಂಗ್ ರೋಡ್ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ ಅ.29 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯ ವರೆಗೆ ಪಿ ಅಂಡ್ ಟಿ ಕ್ವಾಟ್ರ್ರಸ್, ಡೈರಿ ಸರ್ಕಲ್, ರಿಂಗ್ ರಸ್ತೆ, ಕೆ.ಇ.ಬಿ ಆಫೀಸ್ ಹಿಂಭಾಗ, ಆನಂದ ಲಾಯರ್ ಮನೆ ರೋಡ್, ಜುವೆಲ್ ರ‍್ಯಾಕ್ ಹೋಟೆಲ್, ಶಂಕರಿಪುರಂ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಚಾ.ವಿ.ಸ.ನಿ.ನಿ., ಕಾರ್ಯ ಮತ್ತು ಪಾಲನಾ ಹಾಸನ ವಿಭಾಗದ ಕಾರ್ಯಪಾಲಕಅಭಿಯಂತರರು(ವಿ) ತಿಳಿಸಿದ್ದಾರೆ.

## ಕನ್ನಡ ರಾಜ್ಯೋತ್ಸವ : ವಿವಿಧ ಸ್ಪರ್ಧೆ

• ಪ್ರಜೋದಯ ವರದಿ

**ಹಾಸನ:** ರಾಜ್ಯ ಸರ್ಕಾರಿ ನೌಕರರ ಕೇಂದ್ರ ಸಂಘ ಬೆಂಗಳೂರಿನ ಆವರಣದಲ್ಲಿ ನ.8 ರಂದು ಕನ್ನಡ ರಾಜ್ಯೋತ್ಸವವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಸಚಿವರಾದ ದಿನೇಶ್ ಗುಂಡೂರಾವ್, ಸಂತೋಷ್ ಲಾಡ್ ಭಾಗವಹಿಸಲಿದ್ದಾರೆ. ರಾಜ್ಯ ಸರ್ಕಾರಿ ನೌಕರರಿಗೆ ರಾಜ್ಯಮಟ್ಟದ ಜನಪದ-ಕನ್ನಡ ಗೀತೆಗಳ ನೃತ್ಯ ಗುಂಪು ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಸ್ಪರ್ಧೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ರಾಜ್ಯ ಸರ್ಕಾರದ ಖಾಯಂ ನೌಕರರು ಸಂಘವು ನೀಡಿರುವ online link address https://forms.gle/8pR3m5nXowwQ zccs9ನಲ್ಲಿ ನೊಂದಯಿಸಿಕೊಳ್ಳುವುದು ಕಡ್ಡಾಯವಾಗಿದೆ. ಸ್ಪರ್ಧೆಯಲ್ಲಿ ವಿಜೇತ ತಂಡಗಳಿಗೆ ಪ್ರಥಮ ಬಹುಮಾನ 1 ಲ.ರೂ, ದ್ವಿತೀಯ ಬಹುಮಾನ 75 ಸಾವಿರ ರೂ, ತೃತೀಯ ಬಹುಮಾನ 50 ಸಾವಿರ ರೂ, ಹಾಗೂ ಸಮಾಧಾನಕರ ಬಹುಮಾನ 20 ಸಾವಿರ ರೂ. ನೀಡಲಾಗುವುದು. ಜಿಲ್ಲಾ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ನೌಕರರು ರಾಜ್ಯಮಟ್ಟದ ಸ್ಪರ್ಧೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವುದು. ಜಿಲ್ಲೆ ಮತ್ತು ತಾಲ್ಲೂಕಿನಿಂದ ಸ್ಪರ್ಧೆಯಲ್ಲಿ ಭಾಗವಹಿಸುವ ಸರ್ಕಾರಿ ನೌಕರರು ನ.2 ರೊಳಗಡೆ ನೊಂದಾಯಿಸಿಕೊಳ್ಳಬೇಕಾಗಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರು ತಿಳಿಸಿದ್ದಾರೆ.

## ವೇಗದ ದ್ವಿಶತಕ : ದಾಖಲೆ ಬರೆದ ಪೃಥ್ವಿ ಶಾ

• ಪ್ರಜೋದಯ ವರದಿ

**ಚಂಡೀಗಡ:** ರಣಜಿ ಟ್ರೋಫಿಯ 2ನೇ ಸುತ್ತಿನ ಗ್ರೂಪ್ ಬಿ ಪಂದ್ಯದಲ್ಲಿ ಚಂಡೀಗಡದ ವಿರುದ್ಧ ಪೃಥ್ವಿ ಶಾ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಮೂರನೇ ಅತೀ ವೇಗದ ದ್ವಿಶತಕ ಸಿಡಿಸಿದ ಭಾರತೀಯ ಬ್ಯಾಟರ್ ಎಂಬ ದಾಖಲೆ ಮಾಡಿದರು. ಅವರು ಕೇವಲ 141 ಎಸೆತಗಳಲ್ಲಿ ದ್ವಿಶತಕ ಪೂರೈಸಿದರು.

ಚಂಡೀಗಡ ವಿರುದ್ಧದ ರಣಜಿ ಟ್ರೋಫಿಯ 2ನೇ ಸುತ್ತಿನ ಪಂದ್ಯದಲ್ಲಿ ಮಹಾರಾಷ್ಟ್ರ 2ನೇ ಇನ್ನಿಂಗ್ಸ್ ಡಿಕ್ಲೇರ್ ಮಾಡಿಕೊಂಡು ಚಂಡೀಗಡಕ್ಕೆ 464 ರನ್‌ಗಳ ಕಠಿಣ ಗುರಿ ನೀಡಿದೆ. ಈ ಪಂದ್ಯದಲ್ಲಿ ಸ್ಫೋಟಕ ಬ್ಯಾಟಿಂಗ್ ಪ್ರದರ್ಶಿಸಿದ ಪೃಥ್ವಿ ಶಾ ಕೇವಲ 156 ಎಸೆತಗಳಲ್ಲಿ 29 ಬೌಂಡರಿ ಮತ್ತು 5 ಸಿಕ್ಸರ್‌ಗಳ ನೆರವಿನಿಂದ ಅಜೇಯ 222 ರನ್ ಗಳಿಸಿದರು.

ಈ ಸ್ಫೋಟಕ ಬ್ಯಾಟಿಂಗ್ ನೆರವಿನಿಂದ ಶಾ ಅವರು ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಮೂರನೇ ಅತೀ ವೇಗದ ದ್ವಿಶತಕ ಸಿಡಿಸಿದ ಭಾರತೀಯ ಬ್ಯಾಟರ್ ಎಂಬ ಸಾಧನೆ ಮಾಡಿದರು.ಇದಕ್ಕೂ ಮೊದಲು ರವಿಶಾಸ್ತ್ರಿ1985ರಲ್ಲಿ ಬರೋಡಾ ವಿರುದ್ಧ 123 ಎಸೆತಗಳಲ್ಲಿ ದ್ವಿಶತಕ ಸಿಡಿಸಿದ್ದರು.

## ವಿದ್ಯುತ್ ಕಾಮಗಾರಿ: ಸಾರ್ವಜನಿಕರಿಗೆ ಎಚ್ಚರಿಕೆ

• ಪ್ರಜೋದಯ ವರದಿ

**ಹಾಸನ:** ದುದ್ದ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ 220 ಕೆ.ವಿ. ದುದ್ದ ವಿದ್ಯುತ್ ಸ್ವೀಕರಣಾ ಕೇಂದ್ರ ಹಾಗೂ 220ಕೆ.ವಿ. ಮತ್ತು 66 ಕೆ.ವಿ ವಿದ್ಯುತ್ ಮಾರ್ಗಗಳಾದ ಹಾಲಿ ಇರುವ 220ಕೆ.ವಿ. ಎಮ್1- ಎಮ್2 ವಿದ್ಯುತ್ ಮಾರ್ಗದಿಂದ ಉದ್ದೇಶಿತ ದುದ್ದ 220ಕೆ.ವಿ. ಸ್ವೀಕರಣಾ ಕೇಂದ್ರಕ್ಕೆ 3.57 ಕಿ.ಮೀ ವಿದ್ಯುತ್ ಮಾರ್ಗವನ್ನು ಸಂಪರ್ಕಿಸುವ ಕಾಮಗಾರಿ, 220 ಕೆ.ವಿ.ವಿದ್ಯುತ್ ಸ್ವೀಕರಣಾ ಕೇಂದ್ರದಿಂದ 66 ಕೆ.ವಿ.ದುದ್ದ ವಿದ್ಯುತ್ ವಿತರಣಾ ಕೇಂದ್ರಕ್ಕೆ ಸಂಪರ್ಕಿಸುವ ವಿದ್ಯುತ್ ಮಾರ್ಗವನ್ನು ಸುಮಾರು 0.216 ಕಿ.ಮೀ ನಿರ್ಮಿಸುವ ಕಾಮಗಾರಿ, 220 ಕೆ.ವಿ.ದುದ್ದ ಸ್ವೀಕರಣಾ ಕೇಂದ್ರದಿಂದ ಹಾಲಿ ದುದ್ದ, ಬಸವಾಘಟ್ಟ 66 ಕೆ.ವಿ.ವಿದ್ಯುತ್ ಮಾರ್ಗಕ್ಕೆ ಸಂಪರ್ಕಿಸುವ 0.150 ಕಿ.ಮೀ. ವಿದ್ಯುತ್ ಮಾರ್ಗದ ಕಾಮಗಾರಿಯು ಮುಕ್ತಾಯಗೊಂಡಿದ್ದು, ಅ.27 ರಂದು ಅಥವಾ ನಂತರದ ದಿನಗಳಲ್ಲಿ 66 ಕೆ.ವಿ.ವಿದ್ಯುತ್‌ನ್ನು ಹರಿಸಲಾಗುವುದು.

ಆದ್ದರಿಂದ ಸಾರ್ವಜನಿಕರು ಈ ಮಾರ್ಗದ ವಿದ್ಯುತ್ ಗೋಪುರವನ್ನು ಹತ್ತುವುದಾಗಲಿ, ಅವುಗಳಿಗೆ ದನ-ಕರುಗಳನ್ನು ಕಟ್ಟುವುದಾಗಲಿ, ಹಸಿರು ಬಳ್ಳಿ ಅಥವಾ ಲೋಹದ ತಂತಿಗಳನ್ನು ಎಸೆಯುವುದಾಗಲಿ ಮಾಡಬಾರದು. ಇದರಿಂದ ಸಾರ್ವಜನಿಕರ ಆಸ್ತಿ-ಪಾಸ್ತಿ ಮತ್ತು ಪ್ರಾಣಕ್ಕೆ ಹಾನಿಯಾಗುವ ಸಂಭವವಿರುತ್ತದೆ. ಮೇಲೆ ತಿಳಿಸಿರುವ ಯಾವುದೇ ತರಹದ ದುಷ್ಕೃತ್ಯಗಳಿಗೆ ಒಳಗೊಂಡ ಅಪಘಾತ ಅಥವಾ ಹಾನಿ ಸಂಭವಿಸಿದರೆ ಅವರೇ ಜವಾಬ್ದಾರರಾಗಿರುತ್ತಾರೆ ಹಾಗೂ ವಿದ್ಯುತ್ ಮಾರ್ಗದ 18 ಮೀಟರ್ ಕಾರಿಡಾರ್ ಅಡಿಯಲ್ಲಿ ಯಾವುದೇ ರೀತಿಯ ಕಟ್ಟಡ ಗಳನ್ನು ಕಟ್ಟುವುದಾಗಲಿ ಅಥವಾ ಮರಗಳನ್ನು ಬೆಳೆಸುವುದಾಗಲಿ ಮಾಡ ಬಾರದೆಂದು ಈ ಮೂಲಕ ಸಾರ್ವ ಜನಿಕರಿಗೆ ತಿಳಿಯಪಡಿಸುತ್ತಿದ್ದೇವೆ. ಸಾರ್ವಜನಿಕರ ಬೇಜವಾಬ್ದಾರಿಯಿಂದ ಆಗುವ ಅನಾಹುತಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯ ಮಿತವು ಜವಾಬ್ದಾರಿಯಾಗಿರುವುದಿಲ್ಲವೆಂದು ಕವಿಪ್ರನಿನಿ, ಹಾಸನ ಯೋಜನೆ ಗಳ ವಿಭಾಗದ ಕಾರ್ಯನಿರ್ವಾಹಕ ಇಂಜಿನೀಯರ್ (ವಿ) ತಿಳಿಸಿದ್ದಾರೆ.

### ಅವೈಜ್ಞಾನಿಕ ಕಾಮಗಾರಿ | ವಾಹನ ಸವಾರರಿಗೆ, ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆ

# ಕೌಡಳ್ಳಿ-ಸಕಲೇಶಪುರ ಸಂಪರ್ಕ ರಸ್ತೆ ದುರಸ್ತಿಗೆ ಒತ್ತಾಯ

• ಪ್ರಜೋದಯ ವರದಿ



**ಸಕಲೇಶಪುರ:** ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ಕೌಡಳ್ಳಿ-ಸಕಲೇಶಪುರ ರಸ್ತೆ ತುಂಬಾ ಹದಗೆಟ್ಟಿರುವ ಹಿನ್ನೆಲೆಯಲ್ಲಿ ಗ್ರಾಮಸ್ಥರು ಹಾಗೂ ಪುರಸಭಾ ವ್ಯಾಪ್ತಿಯ ನಾಗರಿಕರು ಪ್ರತಿಭಟನೆ ನಡೆಸಿ ತಕ್ಷಣ ರಸ್ತೆ ಸರಿಪಡಿಸುವಂತೆ ಒತ್ತಾಯಿಸಿದರು.

ಈ ಪ್ರದೇಶದಲ್ಲಿ ರಾಷ್ಟ್ರೀಯ ಹೆದ್ದಾರಿ ನಿರ್ಮಾಣಕ್ಕೂ ಮುನ್ನ ಕೌಡಳ್ಳಿ ಮತ್ತು ಪಟ್ಟಣದ ನಡುವಿನ ರಸ್ತೆ ಪ್ರಮುಖ ಸಂಚಾರ ಮಾರ್ಗವಾಗಿತ್ತು. ಆದರೆ, ಕೆಲವು ವರ್ಷಗಳ ಹಿಂದೆ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರ ಹೊರ ವರ್ತುಲ ರಸ್ತೆ ಕಾಮಗಾರಿ ಪ್ರಾರಂಭಿಸಿದ ಬಳಿಕ ಹಳೆಯ ರಸ್ತೆ ನಿರ್ಲಕ್ಷ್ಯಕ್ಕೆ ಒಳಪಟ್ಟಿತು. ಕಾಮಗಾರಿ ಪೂರ್ಣಗೊಂಡ ಬಳಿಕ ರಸ್ತೆ ಪುನರ್ ನಿರ್ಮಾಣವಾಗಬೇಕಾಗಿದ್ದರೂಯಾವುದೇ ಇಲಾಖೆ ಈ ಕುರಿತು ಗಮನ ಹರಿಸದ ಕಾರಣ ರಸ್ತೆ ಎಲ್ಲೆಡೆ ಗುಂಡಿಬಿದ್ದು ಸಂಚಾರ ಕಷ್ಟಕರವಾಗಿದೆ ಎಂದು ಗ್ರಾಮಸ್ಥರು ದೂರಿದರು.

ಈ ರಸ್ತೆ ಮೂಲಕ ಪ್ರತಿದಿನ ನೂರಾರು ವಿದ್ಯಾರ್ಥಿಗಳು ಕೌಡಳ್ಳಿ ಜೆ.ಎಸ್.ಎಸ್. ವಿದ್ಯಾಸಂಸ್ಥೆ, ಗಣಪಯ ಬುದ್ಧಿಮಾಂದ್ಯ ಶಾಲೆ ಹಾಗೂ ಪಟ್ಟಣದ ವಿವಿಧ ಕಾಲೇಜುಗಳಿಗೆ ತೆರಳುತ್ತಾರೆ. ಮಳೆಗಾಲದಲ್ಲಿ ರಸ್ತೆ ಸಂಪೂರ್ಣ ಹಾಳಾಗಿದ್ದು, ವಾಹನಗಳು ಸಂಚರಿಸಲು, ಜನರು ನಡೆದಾಡಲು ಸಹ ಅಸಾಧ್ಯವಾಗಿದೆ. ಮಕ್ಕಳು ಮತ್ತು ವಾಹನ ಸವಾರರು ಅಪಾಯದ ನಡುವೆಯೇ ಸಂಚರಿಸುತ್ತಿದ್ದಾರೆ. ಕಳೆದ ಕೆಲವು ತಿಂಗಳಲ್ಲಿ ಈ ಭಾಗದಲ್ಲಿ ಹತ್ತಕ್ಕೂ ಹೆಚ್ಚು ಅಪಘಾತಗಳು ಸಂಭವಿಸಿ ನಾಲ್ವರು ಸಾವನ್ನಪ್ಪಿರುವುದಾಗಿ ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ಕಾಮಗಾರಿ ಮಾಡುವ ವೇಳೆ ಗ್ರಾಮಸ್ಥರು ಹಾಗೂ ಪಟ್ಟಣ ನಿವಾಸಿಗಳ ಅನುಕೂಲವನ್ನು ಪರಿಗಣಿಸದೇ ಅವೈಜ್ಞಾನಿಕವಾಗಿ ಕಾಮಗಾರಿ ನಡೆಸಿದ್ದಾರೆ. ಈ ದುಸ್ಥಿತಿಗೆ ಅವರೇ ಹೊಣೆ ಗಾರರು. ಹಲವು ಬಾರಿ ಪುರಸಭೆ, ಗ್ರಾಮ ಪಂಚಾಯಿತಿ ಹಾಗೂ ರಾಷ್ಟ್ರೀಯ ಹೆದ್ದಾರಿ ಇಲಾಖೆಗೆ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಸ್ಥಳಕ್ಕೆ ಯಾವುದೇ ಅಧಿಕಾರಿ ಅಥವಾ ಜನಪ್ರತಿನಿಧಿಗಳು ಆಗಮಿಸದಿದ್ದ ಕಾರಣ ಪ್ರತಿಭಟನಾಕಾರರು ಅಸಮಾಧಾನಗೊಂಡು, ಗುಂಡಿ ಬಿದ್ದಿರುವ ರಸ್ತೆಯಲ್ಲಿ ಗಿಡ ನೆಟ್ಟು ಆಕ್ರೋಶ ವ್ಯಕ್ತಪಡಿಸಿದರು. ಅಧಿಕಾರಿಗಳು ಸ್ಥಳಕ್ಕೆ ಬಂದು ಪರಿಸ್ಥಿತಿ ಪರಿಶೀಲಿಸಿ ಕ್ರಮ ಕೈಗೊಳ್ಳಬೇಕೆಂದು ಅವರು ಆಗ್ರಹಿಸಿದರು.

ಗ್ರಾಮಸ್ಥರು ಜಿಲ್ಲಾ ಆಡಳಿತ, ಪುರಸಭೆ ಹಾಗೂ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿದ್ದು, ತಕ್ಷಣ ರಸ್ತೆ ಗುಂಡಿಗಳನ್ನು ಮುಚ್ಚಿ ಪುನರ್‌ನಿರ್ಮಾಣ ಕಾಮಗಾರಿ ಪ್ರಾರಂಭಿಸಬೇಕೆಂದು ಒತ್ತಾಯಿಸಿ ದ್ದಾರೆ. ಬೇಡಿಕೆ ಈಡೇರಿಸದಿದ್ದರೆ ಬೃಹತ್ ಮಟ್ಟದ ರಸ್ತೆ ತಡೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಕೌಡಳ್ಳಿ ಗ್ರಾಮ ಪಂಚಾಯಿತಿ ಸದಸ್ಯರು ತಿಮ್ಮಯ್ಯ, ರಮೇಶ್, ಕುಮಾರ್, ಕಂಟ್ರಾಕ್ಟರ್ ರಮೇಶ್, ಭಾಸ್ಕರ್ ನಾಯ್ಡು, ಕಾಳಯ್ಯ, ಸಂದೇಶ್, ಮೋಹನ್ ಕುಮಾರ, ಗಣೇಶ್, ದೇವಪ್ಪ, ಚಂದ್ರಶೇಖರ್ ಮತ್ತು ಕುಮಾರಸ್ವಾಮಿ ಮೊದಲಾದವರು ಭಾಗವಹಿಸಿದ್ದರು.

## ಹೈಕಮಾಂಡ್ ತೀರ್ಮಾನಿಸಿದ್ರೆ ನಾನೇ ಪೂರ್ಣಾವಧಿ ಸಿಎಂ

» ಮೊದಲನೇ ಪುಟದಿಂದ

ಆಡಳಿತಕ್ಕೆ ಚುರುಕು ಕೊಡುವ ಕೆಲಸ ಆಗ ಬೇಕಾಗಿದೆ. ಸಂಪುಟ ಪುನಾರಚನೆ ಬಗ್ಗೆ ನನಗೆ ಯಾರೂ ಹೇಳಿಲ್ಲವೆಂದು ಸ್ಪಷ್ಟಪಡಿಸಿದರು.

**ದಲಿತ ಸಿಎಂ ದಾಳ**

ಸಿದ್ದರಾಮಯ್ಯ ನಂತರ ಉತ್ತರಾಧಿರಾರಿ ಯಾರು ಎಂಬ ಚರ್ಚೆ ಗರಿಗೆದರಿರುವ ಸಂದರ್ಭದಲ್ಲೇ ಗೃಹ ಸಚಿವ ಡಾ.ಜಿ ಪರಮೇಶ್ವರ್, ದಲಿತ ಸಿಎಂ ದಾಳ ಉರುಳಿಸಿದ್ದಾರೆ. ಕೆ.ಹೆಚ್.ಮುನಿಯಪ್ಪ ಸಮರ್ಥರಿದ್ದಾರೆ. ಅವರು ಅರ್ಹರಿದ್ದಾರೆ. ಮುನಿಯಪ್ಪ ಮುಖ್ಯಮಂತ್ರಿ ಆದರೆ ಸ್ವಾಗತಿಸುತ್ತೇನೆ. ನಮ್ಮ ವರ್ಗದವರು ಮುಖ್ಯಮಂತ್ರಿಯಾಗುತ್ತಾರೆಂದರೆ ಖುಷಿ ವಿಚಾರ ಎಂದಿದ್ದಾರೆ. ಈ ಮಧ್ಯೆ, ಬೆಂಗಳೂರಿನ ಪರಮೇಶ್ವರ್ ನಿವಾಸದ ಮುಂದೆ ಅಭಿಮಾನಿಗಳು ಮುಂದಿನ ಮುಂದಿನ ಮುಖ್ಯಮಂತ್ರಿ ಪರಮೇಶ್ವರ್ ಎಂದು ಘೋಷಣೆ ಕೂಗಿ, ಕ್ರಾಂತಿ ಕಿಚ್ಚನ್ನು ಮತ್ತಷ್ಟು ಹೆಚ್ಚಿಸಿದೆ.

ದಲಿತ ಮುಖ್ಯಮಂತ್ರಿ ಚರ್ಚೆ ಬಗ್ಗೆ ಪ್ರತಿಕ್ರಿಯಿಸಿರುವ ಸಚಿವ ಸತೀಶ್ ಜಾರಕಿಹೊಳಿ, ಅವಕಾಶ ಸಿಕ್ಕರೆ ಒಳ್ಳೆಯದು. ನಾವು ಈಗಾಗಲೇ ನಮ್ಮ ಅಭಿಪ್ರಾಯ ಹೇಳಿದ್ದೇವೆ. ಅಂತಿಮವಾಗಿ ಯಾರನ್ನು ಮಾಡಬೇಕೆಂಬುದನ್ನು ಹೈಕಮಾಂಡ್ ನಿರ್ಧರಿಸುತ್ತದೆ. ಇದೇ ವೇಳೆ ನವೆಂಬರ್ ಕ್ರಾಂತಿ ಬಗ್ಗೆ ಪ್ರತಿಕ್ರಿಯಿಸಿ, ಇನ್ನೇನು ನವೆಂಬರ್ ಬರುತ್ತಿದೆ. ಕಾದು ನೋಡೋಣ ಎಂದಿದ್ದಾರೆ. ಕಾಂಗ್ರೆಸ್‌ನಲ್ಲಿ ಶಿಂಧೆ, ಪವಾರ್ ಯಾರು ಹುಟ್ಟಿಕೊಳ್ಳಲ್ಲ ಎಂದೂ ಹೇಳಿದ್ದಾರೆ.

# ಇಂದಿನಿಂದಲೇ ರಾಷ್ಟ್ರವ್ಯಾಪಿ ಎಸ್‌ಐಆರ್ ಆರಂಭ

### ಭಾರತೀಯ ಚುನಾವಣಾ ಆಯೋಗ ಘೋಷಣೆ | ಮೊದಲ ಹಂತದಲ್ಲಿ 12 ರಾಜ್ಯಗಳ ಪರಿಷ್ಕರಣೆ

• ಪ್ರಜೋದಯ ವರದಿ

**ನವದೆಹಲಿ:** ಬಿಹಾರದಲ್ಲಿ ಯಶಸ್ವಿಯಾಗಿ ಪೂರ್ಣಗೊಂಡ ನಂತರ, ವಿವಾದಾತ್ಮಕ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)ಯನ್ನು ದೇಶಾದ್ಯಂತ ನಡೆಸುವುದಾಗಿ ಭಾರತೀಯ ಚುನಾವಣಾ ಆಯೋಗ ಸೋಮವಾರ ಘೋಷಿಸಿದೆ.




ಮಂಗಳವಾರದಿಂದಲೇ ರಾಷ್ಟ್ರವ್ಯಾಪಿ ಎಸ್‌ಐಆರ್ ಆರಂಭವಾಗಲಿದ್ದು, ಮೊದಲ ಹಂತದಲ್ಲಿ ತಮಿಳುನಾಡು, ಕೇರಳ ಮತ್ತು ಪಶ್ಚಿಮ ಬಂಗಾಳ ಸೇರಿ 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿಯ ಶುದ್ಧೀಕರಣ ಕಾರ್ಯ ನಡೆಯಲಿದೆ.

ಸೋಮವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು, ನಾವು ಬಿಹಾರದಲ್ಲಿ ಮತದಾರರ ಪಟ್ಟಿಯನ್ನು ಶುದ್ಧೀಕರಿಸುವ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದೇವೆ. ಅದರ ಫಲಿತಾಂಶವು ನಿಮ್ಮ ಮುಂದಿದೆ. ಶೂನ್ಯ ಮೇಲ್ಮನವಿಗಳು ಬಂದಿವೆ. ರಾಷ್ಟ್ರವ್ಯಾಪಿ ವಿಶೇಷ ಸಮಗ್ರ ಪರಿಷ್ಕರಣೆ ಮೊದಲ ಹಂತದಲ್ಲಿ ಒಳಗೊಳ್ಳುವ 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮತದಾರರ ಪಟ್ಟಿಗಳನ್ನು ಸೋಮವಾರ ಮಧ್ಯರಾತ್ರಿ ಸ್ಥಗಿತಗೊಳಿಸಲಾಗುವುದೆಂದು ಅವರು ತಿಳಿಸಿದರು.

ಆ ಪಟ್ಟಿಯಲ್ಲಿರುವ ಎಲ್ಲಾ ಮತದಾರರಿಗೆ ಬಿಎಲ್‌ಒಗಳು ವಿಶಿಷ್ಟ ಎಣಿಕೆ ನಮೂನೆಗಳನ್ನು ನೀಡುತ್ತಾರೆ. ಈ ಎಣಿಕೆ ನಮೂನೆಗಳು ಪ್ರಸ್ತುತ ಮತದಾರರ ಪಟ್ಟಿಯಿಂದ ಅಗತ್ಯವಿರುವ ಎಲ್ಲಾ ವಿವರಗಳನ್ನು ಹೊಂದಿರುತ್ತವೆ. ಬಿಎಲ್‌ಒಗಳು ಅಸ್ತಿತ್ವದಲ್ಲಿರುವ ಮತದಾರರಿಗೆ ಫಾರ್ಮ್‌ಗಳನ್ನು ವಿತರಿಸಲು ಪ್ರಾರಂಭಿಸಿದ ನಂತರ, ಎಣಿಕೆ ನಮೂನೆಗಳಲ್ಲಿ ಹೆಸರುಗಳನ್ನು ಹೊಂದಿರುವ ಎಲ್ಲರೂ ತಮ್ಮ ಹೆಸರುಗಳು 2003ರ ಮತದಾರರ ಪಟ್ಟಿಯಲ್ಲಿವೆಯೇ ಎಂದು ಪರಿಶೀಲಿಸಬೇಕು. ಇದೆ ಎಂದಾದರೆ, ಅವರು ಯಾವುದೇ ಹೆಚ್ಚುವರಿ ದಾಖಲೆಗಳನ್ನು ಸಲ್ಲಿಸುವ ಅಗತ್ಯವಿಲ್ಲ ಎಂದು ಹೇಳಿದರು.

ಆಯೋಗದ ಕಾನೂನಿನ ಪ್ರಕಾರ ಮತದಾರರ ಪಟ್ಟಿ ಪರಿಷ್ಕರಣೆ ಅಗತ್ಯವಿದೆ. ಪ್ರತಿಯೊಂದು ರಾಜಕೀಯ ಪಕ್ಷವೂ ಪರಿಷ್ಕರಣೆ ನಡೆಸದ ಬಗ್ಗೆ ದೂರು ನೀಡಿವೆ. ಇಲ್ಲಿಯವರೆಗೆ ಎಂಟು ಬಾರಿ ವಿಶೇಷ ಸಮಗ್ರ ಪರಿಷ್ಕರಣೆ ನಡೆಸಿದೆ. 2002–2004 ರಲ್ಲಿ ಕೊನೆಯದಾಗಿ ನಡೆಸಲಾಗಿತ್ತು. ಎರಡು ದಶಕದ ಬಳಿಕ ಈಗ ಮಾಡಲಾಗುತ್ತಿದೆ. ಕಳೆದ 20 ವರ್ಷದ ಅವಧಿಯಲ್ಲಿ ಸಾಕಷ್ಟು ಬದಲಾವಣೆಯಾಗಿದೆ. ಸಾಕಷ್ಟು ಮತದಾರರ ವಿಳಾಸ ಬದಲಾವಣೆಯಾಗಿರುತ್ತದೆ, ವಿದೇಶಿಗರು ಪಟ್ಟಿಯಲ್ಲಿ ಸೇರಿರುತ್ತಾರೆ. ಕೆಲವರು ಮರಣದ ಬಳಿಕವೂ ಪಟ್ಟಿಯಲ್ಲಿ ಹೆಸರು ಉಳಿದುಕೊಂಡಿರುತ್ತದೆ. ಇದನ್ನು ತೆರವು ಮಾಡಲು ಪರಿಷ್ಕರಣೆ ಅಗತ್ಯವಿದೆ ಎಂದು ಆಯೋಗದ ನಿರ್ಧಾರವನ್ನು ಸಮರ್ಥಿಸಿಕೊಂಡರು.

**ಎಲ್ಲೆಲ್ಲಿ ಎಸ್‌ಐಆರ್**

ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಗೋವಾ, ಪುದುಚೇರಿ, ಛತ್ತೀಸ್‌ಗಢ, ಗುಜರಾತ್, ಕೇರಳ, ಮಧ್ಯಪ್ರದೇಶ, ಉತ್ತರ ಪ್ರದೇಶ, ರಾಜಸ್ಥಾನ, ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಲಕ್ಷದ್ವೀಪ.

## ಜಿಲ್ಲಾಧಿಕಾರಿ ಮಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಲಿ

• ಮೊದಲನೇ ಪುಟದಿಂದ

ಜಿಲ್ಲೆಯಲ್ಲಿ ವಾಡಿಕೆಗಿಂತ ದುಪ್ಪಟ್ಟು ಮಳೆಯಾಗಿ ಅಪಾರ ಪ್ರಮಾಣದ ಮಳೆಹಾನಿಯಾಗಿದೆ. ಜಿಲ್ಲಾಧಿಕಾರಿ ಬೈಕ್‌ನಲ್ಲಿ ನಗರ ಸುತ್ತುವ ಬದಲು ಹಳ್ಳಿಗಳಿಗೂ ಭೇಟಿ ನೀಡಲಿ. ಜಿಲ್ಲಾ ಉಸ್ತುವಾರಿ ಸಚಿವರು ಕೂಡ ಈ ಬಗ್ಗೆ ಪರಿಶೀಲನೆ ನಡೆಸಬೇಕು. ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ ಇಲಾಖೆ ಅಧಿಕಾರಿಗಳು ಸ್ಥಳಗಳಿಗೆ ಭೇಟಿ ನೀಡಿ ವರದಿ ಸಲ್ಲಿಸಬೇಕು. ಯಾರು ಭೇಟಿ ನೀಡುವುದಿಲ್ಲ ಅಂತಹವರಿಗೆ ನೋಟೀಸ್ ನೀಡುವಂತೆ ತಹಶೀಲ್ದಾರ್ ಅವರಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಕೋಟ್ಯಾಂತರೂ. ಬೆಳೆ ನಷ್ಟವಾಗಿದೆ. ಈ ಬಗ್ಗೆ ಜಿಲ್ಲಾಡಳಿತ ಯಾವುದೇ ರೀತಿಯಲ್ಲೂ ಗಮನ ಹರಿಸಿಲ್ಲ. ಹೊಳೆನರಸೀಪುರ ಕ್ಷೇತ್ರದ ಒಂದಲ್ಲೇ 50 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆ ಜೋಳಕ್ಕೆ ಹಾನಿಯಾಗಿದೆ. ಹಾಸನ ಕ್ಷೇತ್ರದಲ್ಲಿ 2 ಲಕ್ಷ ಹೆಕ್ಟೇರ್‌ನಲ್ಲಿ ಹಾನಿಯಾಗಿದೆ. ಅಲಸಂದೆ, ತಂಬಾಕು, ರಾಗಿ, ಭತ್ತ ಸೇರಿ ಹಲವು ಬೆಳೆಗಳು ಹಾನಿಗೀಡಾಗಿದೆ. ಕೆರೆ, ರಸ್ತೆ, ಸೇತುವೆಗಳು ಮಳೆ ಹಾನಿಗೆ ತುತ್ತಾಗಿವೆ. ತಹಶೀಲ್ದಾರ್ ಇನ್ನು ಎರಡು ದಿನಗಳಲ್ಲಿ ಬೆಳೆ ಹಾನಿ ವರದಿ ತರಿಸಿಕೊಂಡು ಶೀಘ್ರದಲ್ಲೇ ರೈತರಿಗೆ ಪರಿಹಾರ ನೀಡಲು ಮುಂದಾಗಬೇಕೆಂದು ನಿರ್ದೇಶನ ನೀಡಿದರು.

ಕೇಂದ್ರ ಸರ್ಕಾರದ ಪರಿಹಾರಕ್ಕೆ ಕಾಯದೆ, ತಾರತಮ್ಯ ನೀತಿ ಅನುಸರಿಸದೆ ರಾಜ್ಯ ಸರ್ಕಾರ ಕೂಡಲೇ ಪರಿಹಾರ ನೀಡಲು ಮುಂದಾಗಬೇಕು. ಜಿಲ್ಲಾ ಉಸ್ತುವಾರಿ ಸಚಿವರು ಉತ್ತಮವಾಗಿ ಕೆಲಸ ಮಾಡುತ್ತಿದ್ದರೆ, ಜಿಲ್ಲೆಯ ರೈತರ ಬಗ್ಗೆ ಕಾಳಜಿ ತೋರಿ, ನೆರವಿಗೆ ದಾವಿಸಬೇಕು. ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಸರಿಪಡಿಸಬೇಕು. ಪಿಡಿಒಗಳು ಗ್ರಾಮಗಳಿಗೆ ಭೇಟಿ ನೀಡಿ, ಅಂಗನವಾಡಿ ಕಟ್ಟಡಗಳ ದುರಸ್ತಿ, ಶಾಲಾ ಕಾಂಪೌಂಡ್ ನಿರ್ಮಾಣಕ್ಕೆ ಯೋಜನಾ ವರದಿ ಸಲ್ಲಿಸಿ ಸಲ್ಲಿಸಬೇಕು. ಶಾಲಾ ಜಾಗವನ್ನು ಸರ್ವೆ ಮಾಡಿಸಿ, ಖಾತೆ ಮಾಡಿಕೊಡಲು ಮುಂದಾಗಬೇಕೆಂದು ಹೇಳಿದರು. ತಹಶೀಲ್ದಾರ್ ಗೀತಾ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸೋಮನಹಳ್ಳಿ ನಾಗರಾಜ್ ಮತ್ತಿತರರು ಹಾಜರಿದ್ದರು.

## ಮೊಂತಾ ಚಂಡಮಾರುತ: ಮಳೆ ಮುನ್ಸೂಚನೆ



• ಪ್ರಜೋದಯ ವರದಿ

**ಬೆಂಗಳೂರು:** ಮೊಂತಾ ಚಂಡಮಾರುತದ ಹಿನ್ನಲೆ ರಾಜ್ಯಾದ್ಯಂತ ಮಂಗಳವಾರ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಕರಾವಳಿ ಭಾಗದಲ್ಲಿ ಧಾರಾಕಾರ ಮಳೆಯಾಗುವ ನಿರೀಕ್ಷೆ ಇದ್ದರೂ ಕಳೆದ ದಿನಗಳಿಗೆ ಹೋಲಿಸಿದರೆ ಮಳೆಯ ಪ್ರಮಾಣ ಕಡಿಮೆ ಇರಲಿದೆ. ರಾಜ್ಯದ ಹಲವು ಭಾಗಗಳಲ್ಲಿ ಮೋಡ ಕವಿದ ವಾತಾವರಣ ಅಥವಾ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ದಕ್ಷಿಣ ಒಳನಾಡು ಭಾಗದ ಜಿಲ್ಲೆಗಳಾದ ಹಾಸನ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ಮಂಡ್ಯ, ಮೈಸೂರು, ಚಾಮರಾಜನಗರ, ತುಮಕೂರು, ಚಿತ್ರದುರ್ಗ, ದಾವಣಗೆರೆ, ಚಿಕ್ಕಮಗಳೂರು, ಶಿವಮೊಗ್ಗಾ ಮತ್ತು ಕೊಡಗಿನಲ್ಲಿ ಗುಡುಗು-ಮಿಂಚಿನ ಸಹಿತ ಮಳೆಯ ನಿರೀಕ್ಷೆ ಇದೆ .

ಕರಾವಳಿ ಜಿಲ್ಲೆಗಳಾದ ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮಳೆ ಮುಂದುವರಿಯಲಿದೆ. ಮಂಗಳೂರು ನಗರದಲ್ಲಿ ಸಾಧಾರಾಣ ಮಳೆಯಾಗಲಿದ್ದು, ಜಿಲ್ಲೆಯ ಉಳಿದೆಡೆ ಉತ್ತಮ ಮಳೆಯ ನಿರೀಕ್ಷೆ ಇದೆ. ಉತ್ತರ ಒಳನಾಡು ಭಾಗದ ಜಿಲ್ಲೆಗಳಾದ ಬೆಳಗಾವಿ, ಧಾರವಾಡ, ಹಾವೇರಿ, ಕಲಬುರಗಿ, ವಿಜಯಪುರ ಮತ್ತು ರಾಯಚೂರು ಸೇರಿ ಇತರೆ ಜಿಲ್ಲೆಗಳಲ್ಲಿ ಸಣ್ಣ ಪ್ರಮಾಣದ ಮಳೆಯಾಗಲಿದ್ದು, ಗಾಳಿಯ ವೇಗ ಗಂಟೆಗೆ 30-40 ಕಿ.ಮೀ. ಇರಲಿದೆ. ಬೆಂಗಳೂರಿನಲ್ಲೂ ವರುಣ ಅಬ್ಬರಿಸಲಿದ್ದು, ಮಧ್ಯಾಹ್ನ ಅಥವಾ ಸಂಜೆಯ ವೇಳೆಗೆ ಮಳೆಯಾಗುವ ನಿರೀಕ್ಷೆ ಇದೆ. ಅಲ್ಲಲ್ಲಿ ತುಂತುರು ಅಥವಾ ಸಾಧಾರಣ ಮಳೆ ಅಂದಾಜಿಸಲಾಗಿದೆ.

**3 ದಿನಗಳ ಕಾಲ ರಾಜ್ಯದಲ್ಲಿ ಮಳೆ**

ಮೊಂತಾ ಚಂಡಮಾರುತ ಹಿನ್ನಲೆ ಮುಂದಿನ 3 ದಿನಗಳ ಕಾಲ ರಾಜ್ಯದಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ಇದೆ. ಬೆಂಗಳೂರು ಸೇರಿ ಹಾವೇರಿ, ಧಾರವಾಡ, ಬೆಳಗಾವಿ, ಬಾಗಲಕೋಟೆ, ಬೀದರ್, ಕಲಬುರಗಿ ಜಿಲ್ಲೆಯಲ್ಲಿ ಯಲ್ಲೋ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಚಿತ್ರದುರ್ಗ, ದಾವಣಗೆರೆಯಲ್ಲೂ ಮಳೆಯಾಗುವ ಬಗ್ಗೆ ಹವಾಮಾನ ಇಲಾಖೆಯಿಂದ ಮುನ್ಸೂಚನೆ ಸಿಕ್ಕಿದೆ.

## ಕರ್ತವ್ಯ ಲೋಪ: ಹುಣಸವಳ್ಳಿ ಪಿಡಿಓ ವರ್ಗಾವಣೆ

• ಪ್ರಜೋದಯ ವರದಿ



**ಆಲೂರು:** ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿ ನಿಧಿಗಳು, ಕ್ಷೇತ್ರ ಶಾಸಕರ ಶಿಫಾರಸ್ಸು ಪರಿಗಣಿಸಿ ಕರ್ತವ್ಯ ಲೋಪ ಆರೋಪದಡಿ ಹುಣಸವಳ್ಳಿ ಪಿಡಿಓ ಕೆ.ಎಸ್.ಅಶೋಕ್ ಅವರನ್ನು ಬೇಲೂರು ತಾಲ್ಲೂಕಿನ ನಾರಾಯಣ ಪುರ ಗ್ರಾಮ ಪಂಚಾಯಿತಿಗೆ ವರ್ಗಾವಣೆ ಮಾಡಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ ಅವರು ಆದೇಶ ಹೊರಡಿಸಿದ್ದಾರೆ.

ಕೆ.ಎಸ್.ಅಶೋಕ್ ಅವರು ಗ್ರಾಮ ಪಂಚಾಯಿತಿ ಗಮನಕ್ಕೆ ಬಾರದಂತೆ ಹೊಸ ಬಡಾವಣೆಗಳಿಗೆ ಇ-ಸ್ವತ್ತು ವಿತರಿಸುವುದು, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ, 15ನೇ ಹಣಕಾಸು ಯೋಜನೆ ಕಾಮಗಾರಿ ಅನುಷ್ಠಾನದಲ್ಲಿ ನಿರ್ಲಕ್ಷ್ಯ ತೋರುತ್ತಿದ್ದಾರೆ. ಅವರ ನಡವಳಿಕೆ ಗ್ರಾಮ ಪಂಚಾಯಿತಿಗೆ ಕಪ್ಪು ಚುಕ್ಕೆಯಾಗಿದ್ದು, ಬೇರೆ ಕಡೆಗೆ ವರ್ಗಾವಣೆ ಮಾಡಬೇಕೆಂದು ಪಂಚಾಯಿತಿ ಅಧ್ಯಕ್ಷರು ಸೇರಿ ಎಲ್ಲಾ ಪ್ರತಿನಿಧಿಗಳು ಲಿಖಿತ ಮನವಿ ಸಲ್ಲಿಸಿದ್ದರು.

ಕ್ಷೇತ್ರ ಶಾಸಕ ಸಿಮೆಂಟ್ ಮಂಜು ಸಹ ಇದೇ ವಿಚಾರಗಳನ್ನು ಪ್ರಸ್ತಾಪಿಸಿ ಕೆ.ಎಸ್.ಅಶೋಕ್ ಅವರ ವರ್ಗಾವಣೆಗೆ ಒತ್ತಾಯಿಸಿದ್ದರು. ಈ ಬಗ್ಗೆ ಪರಿಶೀಲನೆ ನಡೆಸಿದ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಅಶೋಕ್ ಅವರನ್ನು ನಾರಾಯಣಪುರ ಪಂಚಾಯಿತಿಗೆ ವರ್ಗ ಮಾಡಿದ್ದಾರೆ. ನಾರಾಯಣಪುರ ಪಿಡಿಓ ಹೆಚ್.ವಿ. ಸಹನ ಅವರನ್ನು ತಾತ್ಕಾಲಿಕವಾಗಿ ಹಾಸನ ಜಿಲ್ಲಾ ಪಂಚಾಯಿತಿ ಕಚೇರಿಗೆ ನಿಯೋಜಿಸಲಾಗಿದೆ.

## ಹಾಡಹಗಲೇ ಯುವಕನ ಬರ್ಬರ ಹತ್ಯೆ

• ಪ್ರಜೋದಯ ವರದಿ

**ಬೇಲೂರು:** ಹಾಡಹಗಲೇ ಯುವಕನನ್ನು ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಪಟ್ಟಣದ ಬಸ್ ನಿಲ್ದಾಣದಲ್ಲಿ ಸೋಮವಾರ ನಡೆದಿದೆ.



ಪಟ್ಟಣದ ಚನ್ನಕೇಶವಗೌಡರ ಬೀದಿಯ ನಿವಾಸಿ ಗಿರೀಶ್ (28) ಕೊಲೆಯಾದ ಯುವಕ, ಸುರಪುರ ಗ್ರಾಮದ ಶ್ರೀನಿವಾಸ್ ಅಲಿಯಾಸ್ ಸೀನ ಕೊಲೆ ಆರೋಪಿ. ವೈಯಕ್ತಿಕ ಕಾರಣಕ್ಕೆ ಗಿರೀಶ್ ಮತ್ತು ಮತ್ತು ಕೋಳಿ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದ ಸೀನ ಎಂಬಾತನ ನಡುವೆ ಭಾನುವಾರ ರಾತ್ರಿ ಯುವತಿಯ ವಿಚಾರಕ್ಕೆ ಜಗಳ ನಡೆದಿತ್ತು. ಜಗಳ ವೈಷಮ್ಯಕ್ಕೆ ತಿರುಗಿದ್ದರಿಂದ ಗಿರೀಶ್‌ನ ಹತ್ಯೆಗೆ ಸೀನಾ ಹೊಂಚು ಹಾಕಿದ್ದ. ಸೋಮವಾರ 11 ರ ವೇಳೆಗೆ ಗಿರೀಶ್ ಪಟ್ಟಣದ ಬಸ್ ನಿಲ್ದಾಣದಲ್ಲಿ ಶೌಚಾಲಯಕ್ಕೆ ತೆರಳಿದ್ದ. ಇದನ್ನೇ ಕಾದಿದ್ದ ಸೀನಾ, ಏಕಾಏಕಿ ದಾಳಿ ನಡೆಸಿ, ಕೋಳಿ ಮಾಂಸ ಕತ್ತರಿಸುವ ಕತ್ತಿಯಲ್ಲೇ ಗಿರೀಶ್‌ನನ್ನು ಮನ ಬಂದಂತೆ ಕೊಚ್ಚಿದ್ದಾನೆ.

ಮಚ್ಚಿನ ಏಟಿನಿಂದ ಗಂಭೀರವಾಗಿ ಗಾಯಗೊಂಡ ಗಿರೀಶ್‌ನನ್ನು ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ, ನಂತರ ಹೆಚ್ಚಿನ ಚಿಕಿತ್ಸೆಗಾಗಿ ಹಾಸನ ಜಿಲ್ಲಾಸ್ಪತ್ರೆಗೆ ಸಾಗಿಸಲಾಯಿತು. ಗಂಭೀರವಾಗಿ ಗಾಯಗೊಂಡಿದ್ದ ಗಿರೀಶ್ ಮಾರ್ಗ ಮಧ್ಯೆಯೇ ಕನೆಯುಸಿರೆಳೆದಿದ್ದಾನೆಂದು ವೈದ್ಯರು ತಿಳಿಸಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮದ್ ಸುಜೀತಾ, ಸ್ಥಳೀಯ ಪೊಲೀಸರು ಹಾಗು ಡಿವೈಎಸ್ಪಿ ಮೊದಲಾದವರು ಪರಿಶೀಲನೆ ನಡೆಸಿದರು. ಆರೋಪಿ ತಲೆ ಮರೆಸಿಕೊಂಡಿದ್ದು, ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ. ಹಾಡಹಗಲೇ ಯುವಕನ ಹತ್ಯೆ ಪಟ್ಟಣದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಪಟ್ಟಣದ ಕೆಲ ಪುಂಡರ ಹಾವಳಿ ರೌಡಿಸಂಗೆ ತಿರುಗುತ್ತಿದೆ. ಪೊಲೀಸ್ ಇಲಾಖೆ ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಯಾವ ಹಂತಕ್ಕೆ ತಲುಪಲಿದೆ ಎಂದು ಪಟ್ಟಣದ ನಿವಾಸಿಗಳು ಆತಂಕ ವ್ಯಕ್ತಪಡಿಸಿದ್ದಾರೆ. ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿರುವ ಸ್ಥಳೀಯ ಪೊಲೀಸರು, ಆರೋಪಿ ಪತ್ತೆಗೆ ಶೋಧ ನಡೆಸಿದ್ದಾರೆ.

## ನ್ಯಾಯಯುತ ಪರಿಹಾರಕ್ಕಾಗಿ ರೈತರ ಬಿಗಿಪಟ್ಟು

» ಮೊದಲನೇ ಪುಟದಿಂದ

ಕಾನೂನಿನ ಅಡಿಯಲ್ಲಿ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. ಶಾಂತಿಯಿಂದ ಸಹಕಾರ ನೀಡಬೇಕೆಂದು ಕೋರಿದರು.

ಈ ವೇಳೆ ರೈತ ಮುಖಂಡರಾದ ಅಶೋಕ್, ಪರಮೇಶ್, ಕುಮಾರಣ್ಣ ಮಾತನಾಡಿ, ಜೀವ ಬಿಟ್ಟೇವು, ಭೂಮಿ ಕೊಡೆವು, ನ್ಯಾಯಯುತ ಪರಿಹಾರ ಕೊಡಿ, ಇಲ್ಲವೇ ಜಾಗ ಖಾಲಿ ಮಾಡಿ, ಬಲವಂತದ ಕಾಮಗಾರಿಗೆ ಮುಂದಾದರೆ ಹೆಣಗಳ ಮೇಲೆ ಟಿಪ್ಪರ್, ರೋಲರ್ ಹತ್ತಿಸಿದರೂ ಹೆದರುವ ಪ್ರಶ್ನೆ ಇಲ್ಲ. ಏಕಾಏಕಿ ಕಾಮಗಾರಿ ನಡೆಸಲು ಮುಂದಾಗಿರುವುದು ಯಾವ ನ್ಯಾಯ ಎಂದು ಆಕ್ರೋಶ ವ್ಯಕ್ತಪಡಿಸಿದರು. ಪರಿಸ್ಥಿತಿ ವಿಕೋಪಕ್ಕೆ ಹೋಗುವುದನ್ನು ಅರಿತ ಜಿಲ್ಲಾಧಿಕಾರಿ ಲತಾಕುಮಾರಿ, ನಿಮ್ಮ ಅಹವಾಲನ್ನು ಲಿಖಿತ ರೂಪದಲ್ಲಿ ಸಲ್ಲಿಸಿ, ಸರ್ಕಾರಿ ಭೂಮಿಯಲ್ಲಿ ಉದ್ದೇಶಿತ ಕಾಮಗಾರಿಗೆ ಮಾಡಿ ಎಂದು ಅಧಿಕಾರಿಗಳಿಗೆ ಹೇಳಿದರು.

ರೈತರ ಮನೆಗೆ ತೆರಳಿದ ಜಿಲ್ಲಾಧಿಕಾರಿ ಅವರು ಯೋಗ ಕ್ಷೇಮ ವಿಚಾರಿಸಿ ಉಪಾಹಾರ ಸೇವಿಸಿದರು. ಅಗತ್ಯ ದಾಖಲೆಗಳೊಂದಿಗೆ ಮಂಗಳವಾರ ಕಚೇರಿಗೆ ಬನ್ನಿರಿ ಎಂದು ಆಹ್ವಾನಿಸಿದರು. ಸಮಾಧಾನಗೊಂಡ ರೈತರು, ಸರ್ಕಾರಿ ಭೂಮಿಯಲ್ಲಿ ಕೆಲಸ ಮಾಡಲು ನಮ್ಮ ತಕರಾರಿಲ್ಲ. ಆದರೆ, ಪರಿಹಾರ ನೀಡುವವರೆಗೂ ಭೂಮಿ ಬಿಡುವುದಿಲ್ಲವೆಂದು ಸ್ಪಷ್ಟಪಡಿಸಿದ್ದರಿಂದ ಪರಿಸ್ಥಿತಿ ತಿಳಿಯಾಯಿತು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವಿಶೇಷ ಭೂ ಸ್ವಾಧೀನಾಧಿಕಾರಿ ಧರ್ಮಪಾಲ್, ತಹಶೀಲ್ದಾರ್ ಎಂ.ಜಿ. ಸಂತೋಷ್ ಕುಮಾರ್, ಮುಖಂಡರಾದ ಸುರೇಶ್, ಭೈರಗೊಂಡನಹಳ್ಳಿ ಉಮೇಶ್, ಶಿವಮೂರ್ತಿ, ರಾಜಣ್ಣ, ವಿಜಯಕುಮಾರ್, ಚನ್ನೇಗೌಡ ಇತತರರಿದ್ದರು. ಮುಂಜಾಗ್ರತಾ ಕ್ರಮವಾಗಿ ಬಿಗಿ ಬಂದೋಬಸ್ತ್ ಒದಗಿಸಲಾಗಿತ್ತು.

## ಗೊಂದಲದ ಗೂಡಾದ ಬೇಲೂರು ಪುರಸಭೆ ಸಾಮಾನ್ಯ ಸಭೆ

» ಮೊದಲನೇ ಪುಟದಿಂದ

ಮೀನು ಮಾರುಕಟ್ಟೆ ಬಳಿ ಕಂದಾಯ ಇಲಾಖೆ ಅಧಿಕಾರಿಗಳೇ ಅಕ್ರಮ ಕಟ್ಟಡವೆಂದು ಸೂಚನೆ ನೀಡಿದರೂ ನಮ್ಮ ಅಧಿಕಾರಿಗಳು ಏಕೆ ಕ್ರಮ ಕೈಗೊಳ್ಳುತ್ತಿಲ್ಲವೆಂದರು. ಅದಕ್ಕೆ ಆಕ್ರೋಶ ವ್ಯಕ್ತಪಡಿಸಿದ ಸದಸ್ಯ ಜಗದೀಶ್, ಮೊದಲು ನಿಮ್ಮ ತಟ್ಟೆಯಲ್ಲಿ ಏನು ಬಿದ್ದಿದೆ ನೋಡಿಕೊಳ್ಳಿ. ಅದನ್ನು ಬಿಟ್ಟು ಬೇರೆಯವರ ಆಸ್ತಿ ವಿಚಾರಕ್ಕೆ ತಲೆ ಹಾಕುವುದು ಬೇಡವೆಂದು ತಿರುಗೇಟು ನೀಡಿದರು.

**ಸದಸ್ಯರ ವಿಶ್ವಾಸ ಪಡೆಯುತ್ತಿಲ್ಲ**

ಸದಸ್ಯ ಜಮಾಲ್ ಅವರು ಮಾತನಾಡಿ, ಕ್ರಿಯಾ ಯೋಜನೆ ತಯಾರಿಸುವಾಗ 23 ಸದಸ್ಯರ ಗಮನಕ್ಕೆ ತರದೆ ಅಧಿಕಾರಿಗಳೇ ಕ್ರಿಯಾ ಯೋಜನೆ ತಯಾರಿಸುತ್ತಿದ್ದಾರೆ. ಚುನಾಯಿತ ಪ್ರತಿನಿಧಿಗಳಿಗೆ ಮಾಹಿತಿ ನೀಡದೆ ಅಂಗವಿಕಲರಿಗೆ ನೀಡುವ ಸವಲತ್ತುಗಳನ್ನು ನಮಗೆ ಮಾಹಿತಿ ನೀಡದೆ ಅಧಿಕಾರಿಗಳು ಮಾಡುವುದಾದರೆ ನಾವು ಇಲ್ಲಿ ಏಕೆ ಇರಬೇಕು. ಪುರ ಸಭೆಗೆ ನಮ್ಮನ್ನು ಇಲ್ಲಿ ಕಾಗೆಗಳು ಕಚ್ಚಿ ಕೊಂಡು ಬಂದು ಹಾಕಿಲ್ಲ. ವೈಯಕ್ತಿಕ ವಿಚಾರಗಳನ್ನು ಹೊರಗಡೆ ಬಿಡಿ ಅಭಿವೃದ್ಧಿಗೆ ಎಲ್ಲರೂ ಸಹಕಾರ ನೀಡೋಣ. ಪುರಸಭೆ ವ್ಯಾಪ್ತಿಯ ರಸ್ತೆ ಗುಂಡಿ ಮುಚ್ಚಲು ಕ್ರಮ ವಹಿಸಿ ಎಂದು ಹೇಳಿದರು.

ಸದಸ್ಯ ಗಿರೀಶ್ ಅವರು ಮಾತನಾಡಿ, ಪುರಸಭೆಯಲ್ಲಿ ಅಧಿಕಾರಿಗಳು ಯಾವ ರೀತಿ ಕೆಲಸ ಮಾಡುತ್ತಿದ್ದಾರೆ. ಯಾರೇ ಕಳ್ಳಕಾಕರು ಬಂದರೂ ಇಲ್ಲಿರುವ ವಸ್ತುಗಳನ್ನು ತುಂಬಿಕೊಂಡು ಹೋದರು. ಯಾರಿಗೂ ತಿಳಿಯುವುದಿಲ್ಲ ಇನ್ನು ಗಣಪತಿ ದೇವಾಲಯಕ್ಕೆ ಮೀಸಲಿಟ್ಟ ಜಾಗವನ್ನು ಖಾಸಗಿ ವ್ಯಕ್ತಿಗಳಿಗೆ ಖಾತೆ ಮಾಡಿಕೊಟ್ಟಿದ್ದಾರೆ. ಸಣ್ಣ ಪುಟ್ಟ ವ್ಯಕ್ತಿಗಳು ಸ್ವಲ್ಪ ಒತ್ತುವರಿ ಮಾಡಿದ್ದರು ಅವರ ವಿರುದ್ಧ ಕ್ರಮ ಕೈಗೊಳ್ಳುವುದಿಲ್ಲ. ಬಲಾಢ್ಯರು ಯಾವುದೇ ದಾಖಲೆಗಳನ್ನು ನೀಡದೆ ಬೇಕಾಬಿಟ್ಟಿಯಾಗಿ ಕಾಮಗಾರಿ ಮಾಡಿದರೂ ಕೇಳುವುದಿಲ್ಲವೆಂದರು. ಮುಖ್ಯಾಧಿಕಾರಿ ಬಸವರಾಜು ಕಾಟಪ್ಪ ಶಿಗ್ಗಾವಿ ಇದ್ದರು.

## ಭಾರತ ವಿರುದ್ಧದ ಟೆಸ್ಟ್ ಸರಣಿಗೆ ತೆಂಬಾ ಬವುಮಾ ನಾಯಕ

• ಪ್ರಜೋದಯ ವರದಿ



**ಜೋಹಾನ್ಸ್ ಬರ್ಗ್:** ಗಾಯದ ಸಮಸ್ಯೆಯಿಂದಾಗಿ ಟೆಸ್ಟ್ ಚಾಂಪಿಯನ್‌ಶಿಪ್ 2025ರ ಫೈನಲ್ ಪಂದ್ಯದ ಬಳಿಕ ವಿಶ್ರಾಂತಿ ಪಡೆದಿದ್ದ ದಕ್ಷಿಣ ಆಫ್ರಿಕಾ ತಂಡದ ನಾಯಕ ತೆಂಬಾ ಬವುಮಾ ಚೇತರಿಸಿಕೊಂಡಿದ್ದು, ನ.14 ರಿಂದ ಆರಂಭವಾಗಲಿರುವ ಭಾರತ ವಿರುದ್ಧದ ಟೆಸ್ಟ್ ಸರಣಿಯಲ್ಲಿ ತಂಡವನ್ನು ಮುನ್ನಡೆಸಲಿದ್ದಾರೆ.

ತೆಂಬಾ ಬವುಮಾ ಇತ್ತೀಚೆಗೆ ಪಾಕಿಸ್ತಾನದಲ್ಲಿ ಮುಕ್ತಾಯಗೊಂಡ ಎರಡು ಪಂದ್ಯಗಳ ಟೆಸ್ಟ್ ಸರಣಿಯಿಂದ ದೂರ ಉಳಿದಿದ್ದರು. ಅವರ ಬದಲು ತಂಡದಲ್ಲಿ ಸ್ಥಾನ ಪಡೆದಿದ್ದ ಡೇವಿಡ್ ಬೆಡಿಂಗ್‌ಹ್ಯಾಮ್ ಅವರನ್ನು ಭಾರತ ಸರಣಿಯಿಂದ ಕೈಬಿಡಲಾಗಿದೆ.

ಸದ್ಯ, ಭಾರತ ಸರಣಿಗೆ ಪ್ರಕಟಿಸಿರುವ ದಕ್ಷಿಣ ಆಫ್ರಿಕಾ ತಂಡದಲ್ಲಿ ಪಾಕಿಸ್ತಾನ ವಿರುದ್ಧ ಆಡಿದ್ದ ತಂಡವನ್ನೇ ಬಹುತೇಕ ಉಳಿಸಿಕೊಳ್ಳಲಾಗಿದೆ. ಮೂವರು ಪ್ರಮುಖ ಸ್ಪಿನ್ನರ್‌ಗಳಾದ ಸೈಮನ್ ಹಾರ್ಮರ್, ಕೇಶವ್ ಮಹಾರಾಜ್ ಮತ್ತು ಸೆನುರಾನ್ ಮುತ್ತುಸಾಮಿ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಅವರೊಂದಿಗೆ ವೇಗಿ ಕಗಿಸೊ ರಬಾಡ ಮತ್ತು ಆಲ್‌ರೌಂಡರ್‌ಗಳಾದ ಕಾರ್ಬಿನ್ ಬಾಷ್, ಮಾರ್ಕೊ ಜಾನ್ಸೆನ್ ಮತ್ತು ವಿಯಾನ್ ಮುಲ್ಡರ್ ಸ್ಥಾನ ಪಡೆದಿದ್ದಾರೆ. ನ.14ರಿಂದ 18 ಕೋಲ್ಕತ್ತಾ, ನ.22ರಿಂದ 26 ಗುವಾಹಟಿ

**ಭಾರತ ವಿರುದ್ಧದ ಟೆಸ್ಟ್ ಸರಣಿಗೆ ದಕ್ಷಿಣ ಆಫ್ರಿಕಾ ತಂಡ**

ತೆಂಬಾ ಬವುಮಾ (ನಾಯಕ), ಏಡೆನ್ ಮಾರ್ಕ್‌ರಮ್, ರಿಯಾನ್ ರಿಕೆಲ್ಟನ್, ಟ್ರಿಸ್ಟಾನ್ ಸ್ಟಬ್ಸ್, ಕೈಲ್ ವೆರ್ರೆನ್, ಡೆವಾಲ್ಡ್ ಬ್ರೆವಿಸ್, ಜುಬೇರ್ ಹಮ್‌ಜಾ, ಟೋನಿ ಡಿ ಜೋರ್ಜಿ, ಕಾರ್ಬಿನ್ ಬಾಷ್, ವಿಯಾನ್ ಮುಲ್ಡರ್, ಮಾರ್ಕೊ ಜಾನ್ಸೆನ್, ಕೇಶವ್ ಮಹರಾಜ್, ಸೆನುರಾನ್ ಮುತ್ತುಸಾಮಿ, ಕಗಿಸೋ ರಬಾಡ, ಸೈಮನ್ ಹಾರ್ಮರ್.

## ರೈಲ್ವೆ ಇಲಾಖೆ ನೌಕರ ಮಂಜುನಾಥ್‌ಗೆ ಬೀಳ್ಕೊಡುಗೆ

• ಪ್ರಜೋದಯ ವರದಿ

**ಅರಸೀಕೆರೆ:** ರೈಲ್ವೆ ಇಲಾಖೆಯ ಟಿಟಿಯಾಗಿ ಸುದೀರ್ಘ ಸೇವೆ ಸಲ್ಲಿಸಿ ವಯೋ ನಿವೃತ್ತರಾದ ಮಂಜುನಾಥ್ ಅವರಿಗೆ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗು ಅವರ ಸ್ನೇಹಿತರ ಬಳಗದಿಂದ ಬೀಳ್ಕೊಡಲಾಯಿತು.




ರೈಲ್ವೆ ಇಲಾಖೆಯ ಅನುಗ್ರಹ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಪಾಲ್ಗೊಂಡಿದ್ದ ಮಂಜುನಾಥ್ ಅವರ ಹಿತೈಷಿಗಳು ರೈಲ್ವೆ ಇಲಾಖೆಯಲ್ಲಿ ಮಂಜುನಾಥ್ ಅವರು ಸಲ್ಲಿಸಿದ ಸೇವೆ ಹಾಗು ಸಮಾಜಮುಖಿಯಾ ಚಿಂತನೆಗಳ ಗುಣಗಾನ ಮಾಡಿದರು.

ವಕೀಲ ವಿವೇಕ್ ಅವರು ಮಾತನಾಡಿ, ಉದ್ಯೋಗದಲ್ಲಿ ಸಣ್ಣದು ಮತ್ತು ದೊಡ್ಡದು ಎಂಬುದು ಇರುವುದಿಲ್ಲ. ನಾವು ಆಯ್ಕೆ ಮಾಡಿಕೊಂಡ ಕ್ಷೇತ್ರದಲ್ಲಿ ಪರಿಶುದ್ಧತೆ ಅಳವಡಿಸಿಕೊಂಡರೆ ತಾನಾಗಿಯೇ ತೃಪ್ತಿ ಸಿಗುತ್ತದೆ. ನಮ್ಮ ಸೇವಾ ಕಾರ್ಯವನ್ನು ಜನರು ಮಾತ್ರ ಮೆಚ್ಚು ವುದಿಲ್ಲ ದೇವರು ಮೆಚ್ಚುತ್ತಾನೆ. ಅಂತಹ ಸಾರ್ಥಕ ಸೇವೆಯನ್ನು ಮಂಜುನಾಥ್ ಮಾಡಿದ್ದಾ ರೆಂದರು.

ನಿವೃತ್ತ ನೌಕರ ಮಂಜುನಾಥ್ ಅವರು ಮಾತನಾಡಿ, ಯಾವ ಕೆಲಸವಾದರೂ ಸರಿ ಒಬ್ಬರಿಂದಲೇ ಮಾಡಲು ಸಾಧ್ಯವಿಲ್ಲ. ಅದೇ ರೀತಿ ರೈಲ್ವೆ ಇಲಾಖೆಯ ನೌಕರರಾಗಿ ನನ್ನ ಸೇವೆ ಆರಂಭಿಸಿದ ದಿನದಿಂದ ಇಂದಿನವರೆಗೆ ನನಗೆ ಸಹಕಾರ ನೀಡಿದ ನನ್ನ ಅಪ್ಪ-ಅಮ್ಮ, ಮಡದಿ- ಮಕ್ಕಳು, ಮಾರ್ಗದರ್ಶನ ನೀಡಿದ ಹಿರಿಯ ಅಧಿಕಾರಿಗಳು ಸದಾ ನನ್ನ ಬೆನ್ನು ತಟ್ಟಿ ಪ್ರೋತ್ಸಾಹಿ ಸುತ್ತಾ ಬಂದ ಸ್ನೇಹಿತರಿಗೆ ಧನ್ಯವಾದ ಸಲ್ಲಿಸುತ್ತೇನೆಂದರು.

ನಗರ ಯೋಜನಾ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅರುಣ್ ಕುಮಾರ್, ನಗರಸಭೆ ಮಾಜಿ ಅಧ್ಯಕ್ಷ ಜಿ.ಟಿ.ಗಣೇಶ್, ಮುಖಂಡರಾದ ಕುಮಾರಣ್ಣ, ರೈಲ್ವೆ ರಂಗಣ್ಣ, ಮಲ್ಲಿಕಾರ್ಜುನ್, ನಿಕಟಪೂರ್ವ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಜಿ.ಎನ್.ಮನೋಜ್ ಕುಮಾರ್ ಇತರರಿದ್ದರು.

## ಡಿಜಿಟಲ್ ಅರೆಸ್ಟ್ ಭಯಾನಕ ಬೆದರಿಕೆ: ದ್ರೌಪದಿ ಮುರ್ಮು

**ನವದೆಹಲಿ:** ದೇಶದ ಜನತೆಗೆ ಡಿಜಿಟಲ್ ಅರೆಸ್ಟ್ ಅತ್ಯಂತ ಭಯಾನಕ ಬೆದರಿಕೆಯಾಗಿ ಮಾರ್ಪಟ್ಟಿದೆಯೆಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸೋಮವಾರ ಹೇಳಿದ್ದಾರೆ.

ರಾಷ್ಟ್ರಪತಿ ಭವನದಲ್ಲಿ ಐಪಿಎಸ್ ಪ್ರೊಬೇಷನರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಆರ್ಥಿಕತೆ ವೇಗವಾಗಿ ಬೆಳೆಯುತ್ತಿದೆ. ಅದನ್ನು ಉಳಿಸಲು ಮತ್ತು ವೇಗಗೊಳಿ ಸಲು ಹೆಚ್ಚಿನ ಸಾರ್ವಜನಿಕ ಮತ್ತು ಖಾಸಗಿ ಹೂಡಿಕೆಗಳ ಅಗತ್ಯವಿದೆ ಎಂದರು.

## ರೈತ ಉತ್ಪಾದಕ ಕಂಪನಿ ಅಧ್ಯಕ್ಷರಾಗಿ ಧರ್ಮಪ್ಪ

• ಪ್ರಜೋದಯ ವರದಿ

**ಸಕಲೇಶಪುರ:** ರುದ್ರಗಿರಿ ರೈತ ಉತ್ಪಾದಕ ಕಂಪನಿ ಯ ಅಧ್ಯಕ್ಷರಾಗಿ ಎಂ.ಎನ್. ಧರ್ಮಪ್ಪ ಹಾಗು ಉಪಾಧ್ಯಕ್ಷರಾಗಿ ಕರಗುರು ಗೋವಿಂದೇಗೌಡ ಅವಿರೋಧ ಆಯ್ಕೆಯಾದರು. ಕೇಂದ್ರ ಸರ್ಕಾರದ ಅನುದಾನದ ಅಡಿಯಲ್ಲಿ ನಿರ್ವಹಿಸಲ್ಪಡುವ ಕಂಪನಿ ತಾಲ್ಲೂಕಿನ ಚಂಗಡಿ ಹಳ್ಳಿ ಗ್ರಾಮದಲ್ಲಿ ಕಚೇರಿ ಹೊಂದಿದೆ. ನಿಕಟ ಪೂರ್ವ ಅಧ್ಯಕ್ಷ ಚಿಕ್ಕಂದೂರು ಚನ್ನಕೇಶ್ವರ್ ಅವರು ಅಧಿಕಾರ ಹಸ್ತಾಂ ತರ ಮಾಡಿದರು. ಈ ವೇಳೆ ನಿರ್ದೇಶಕರು ಹಾಜರಿದ್ದರು.



## ರಸ್ತೆ-ಒಳಚರಂಡಿ ಕಲ್ಪಿಸಲು ಒತ್ತಾಯ



**ಚನ್ನರಾಯಪಟ್ಟಣ:** ತಾಲ್ಲೂಕಿನ ಅಕ್ಕನಹಳ್ಳಿ ಕೂಡಿನ ದಿಡಗ ರಸ್ತೆಯಲ್ಲಿನ ನವಗ್ರಾಮ ಕಾಲೋನಿಯಲ್ಲಿ ಕಾಂಕ್ರೀಟ್ ರಸ್ತೆ, ಒಳಚರಂಡಿ ಮತ್ತು ಮೂಲ ಸೌಲಭ್ಯ ಕಲ್ಪಿಸುವಂತೆ ಒತ್ತಾಯಿಸಿ ಕಾಲೋನಿ ನಿವಾಸಿಗಳು ಪ್ರತಿಭಟಿಸಿ ಒತ್ತಾಯಿಸಿದರು.

ಹಲವು ವರ್ಷಗಳಿಂದ ಅಕ್ಕನಹಳ್ಳಿ ಕೊಡಿನ ನವಗ್ರಾಮ ಕಾಲೋನಿಯಲ್ಲಿ ಮನೆಗಳನ್ನು ನಿರ್ಮಾಣ ಮಾಡಿಕೊಂಡು ಸುಮಾರು 40ಕ್ಕೂ ಹೆಚ್ಚು ಕುಟುಂಬಗಳು ವಾಸ ಮಾಡುತ್ತಿದ್ದು, ಇದುವರೆಗೂ ರಸ್ತೆ, ಒಳಚರಂಡಿ ಸೇರಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಲ್ಲ ಎಂದು ಕಾಲೋನಿ ನಿವಾಸಿಗಳೂ ಅಸಮಾಧಾನ ವ್ಯಕ್ತಪಡಿಸಿದರು.

**ಮಳೆಗಾಲದಲ್ಲಿ ಓಡಾಡುವುದೇ ಕಷ್ಟ**

ನವಗ್ರಾಮ ಕಾಲೋನಿಯಲ್ಲಿ ಮಳೆ ಬಂದರೆ ಸಂಪೂರ್ಣ ಕೆಸರುಮಯವಾಗಲಿದ್ದು, ಅದರಿಂದ ವೃದ್ಧರು ಹಾಗೂ ಶಾಲೆಗಳಿಗೆ ಹೋಗುವ ಮಕ್ಕಳು ಓಡಾಡುವುದೇ ಕಷ್ಟಕರವಾಗಲಿದೆ ಎಂದು ಆರೋಪಿಸಿದರು.

ಅನೇಕ ದಿನಗಳಿಂದ ಈ ಬಗ್ಗೆ ಸ್ಥಳೀಯ ಗ್ರಾಮ ಪಂಚಾಯಿತಿ ಹಾಗೂ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ಮನವಿ ನೀಡಿದ್ದರೂ ಸಹ ಪ್ರಯೋಜನವಾಗಿಲ್ಲವೆಂದು ಸ್ಥಳೀಯರಾದ ಕುಮಾರಸ್ವಾಮಿ ಹಿರೇಮಠ್ ತಿಳಿಸಿದರು.

ಅಕ್ಕನಹಳ್ಳಿ ಕೂಡು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ನವಗ್ರಾಮ ಕಾಲೋನಿಯಲ್ಲಿ ಹೆಚ್ಚು ಬಡ ಕುಟುಂಬಗಳೇ ವಾಸ ಮಾಡುತ್ತಿದ್ದು ಪ್ರತಿದಿನ ವ್ಯಾಪಾರ ಸೇರಿ ಇನ್ನಿತರ ಕೂಲಿ ಕೆಲಸಗಳಿಗೆ ಜನ ಬೇರೆ ಬೇರೆ ಪ್ರದೇಶಗಳಿಗೆ ಹೋಗುತ್ತಾರೆ. ರಸ್ತೆ ಹಾಗೂ ಒಳಚರಂಡಿ ಇಲ್ಲದೆ ಕುಟುಂಬ ವಾಸಿಗಳಿಗೆ ಸಮಸ್ಯೆಯಾಗಿದ್ದು, ಜೊತೆಗೆ ಕಾಲೋನಿಯ ಮುಂಭಾಗದಲ್ಲಿ ಹಾಗೂ ಆಯ್ದ ಭಾಗಗಳಲ್ಲಿ ಹೆಚ್ಚಿನ ಗಿಡಗಂಟೆಗಳು ಬೆಳದು ನಿಂತಿವೆ. ಅದರಿಂದ ಸಾಂಕ್ರಾಮಿಕ ರೋಗ ಹರಡುವ ಜೊತೆಗೆ ವಿಷದಂತುಗಳ ಪ್ರಾಣಭಯದಲ್ಲಿ ಕಾಲೋನಿಯ ಜನರು ವಾಸ ಮಾಡು ವಂತಾಗಿದೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಕ್ಷೇತ್ರದ ಶಾಸಕರು ಗಮನ ಹರಿಸುವಂತೆ ಕಾಲೋನಿ ನಿವಾಸಿ ಆಟೋ ನವೀನ್ ಒತ್ತಾಯಿಸಿದರು.

ನಿವಾಸಿಗಳಾದ ಗಾರೆ ರಾಮು, ಗಣೇಶ್, ಕುಮಾರ್, ಕಂಬಯ್ಯ (ಬಂಕಣ್ಣ) ಸೇರಿ ಕಾಲೋನಿ ನಿವಾಸಿಗಳು ಹಾಜರಿದ್ದರು.

## ಪೌರ ಕಾರ್ಮಿಕರ ಆರೋಗ್ಯ ತಪಾಸಣೆಗೆ ಕ್ರಮ ವಹಿಸಿ



• ಪ್ರಜೋದಯ ವರದಿ

**ಹಾಸನ:** ಪೌರಕಾರ್ಮಿಕರಿಗೆ ವಿಶ್ರಾಂತಿ ಗೃಹ ಸೌಲಭ್ಯ ಕಲ್ಪಿಸುವುದರ ಜೊತೆಗೆ ಆರೋಗ್ಯ ತಪಾಸಣೆಗೆ ಕ್ರಮವಹಿಸುವಂತೆ ಅಪರ ಜಿಲ್ಲಾಧಿಕಾರಿ ಮಂಜುನಾಥ್ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಮ್ಯಾನ್ಯುವಲ್ ಸ್ಕ್ಯಾವೆಂಜರ್‌ಗಳ ನಿಯೋಜನೆ ನಿಷೇಧ ಮತ್ತು ಅದರ ಪುನರ್ವಸತಿ ಅಧಿನಿಯಮ 2013 ರ ಅನ್ವಯ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪೌರಕಾರ್ಮಿಕರಿಗೆ ಬೆಳಗಿನ ಉಪಹಾರ ಮತ್ತು ಸುರಕ್ಷತಾ ಪರಿಕರಗಳನ್ನು ಒದಗಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಪೌರಕಾರ್ಮಿಕರಿಗೆ ಗೃಹ ಭಾಗ್ಯ ಯೋಜನೆಯಡಿ ನಿವೇಶನ ಹಂಚಿಕೆಗೆ ಸಂಬಂಧಿಸಿದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಪೌರ ಕಾರ್ಮಿಕರಿಗೆ ಇಪಿಎಫ್ ಮತ್ತು ಪಿಎಫ್ ಹಣ ಪಾವತಿ ಆಗುತ್ತಿರುವ ಬಗ್ಗೆ ಪರಿಶೀಲನೆ ಮಾಡಬೇಕು. ಪೌರ ಕಾರ್ಮಿಕರಿಗೆ ಸುರಕ್ಷಾ ಪರಿಕರಗಳನ್ನು ನೀಡಲಾಗಿದೆಯೇ, ಅವುಗಳ ಬಳಕೆ ಮಾಡುತ್ತಿರುವ ಬಗ್ಗೆ ಪರಿಶೀಲನೆ ಮಾಡಿ, ವರ್ಷಕ್ಕೆ ಮೂರು ಬಾರಿ ಸುರಕ್ಷಾ ಪರಿಕರಗಳನ್ನು ನೀಡಬೇಕು. ನಗರಗಳಲ್ಲಿ ಸ್ವಚ್ಛತೆ ಕಾಪಾಡಲು ನಿಗಾ ವಹಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು. ಸಮಿತಿ ಸದಸ್ಯ ಶ್ರೀನಿವಾಸ್, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ದೂದ್ ಪೀರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅನಿಲ್ ಇದ್ದರು.

## ಚಿನ್ನಾಭರಣ ಕಳವು

**ಹಾಸನ:** ಮನೆಯಲ್ಲಿ ಯಾರೂ ಇಲ್ಲದಾಗ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು 3 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ಸಾಲಗಾಮೆ ರಸ್ತೆಯ ಜಯನಗರದಲ್ಲಿ ನಡೆದಿದೆ.ಮನೆ ಮಾಲೀಕ ರವಿ ಅವರು ಶನಿವಾರ ಮನೆ ಮುಂಬಾಗಿಲ ಬೀಗ ಹಾಕಿ ಕುಟುಂಬ ಸಮೇತ ಧರ್ಮಸ್ಥಳಕ್ಕೆ ತೆರಳಿದ್ದರು. ಮಾರನೇ ದಿನ ಬಂದು ನೋಡಿದಾಗ ಬಾಗಿಲು ಮುರಿದಿರುವುದು ತಿಳಿದಿದೆ. ಬಲವಾದ ಆಯುಧದಿಂದ ಬಾಗಿಲು ಮುರಿದಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ 48 ಗ್ರಾಂ ತೂಕದ ವಿವಿಧ ರೀತಿಯ ಚಿನ್ನಾಭರಣ, 2-1/4 ಕೆಜಿ ತೂಕದ ಬೆಳ್ಳಿ ಸಾಮಾಗ್ರಿ, ಹಾಗು 3 ಸಾವಿರ ರೂ. ಕಳ್ಳತನ ಮಾಡಿದ್ದಾರೆ.

## ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಅಸ್ಸಾಂ ಸಿಎಂ ಗರಂ

**ನವದೆಹಲಿ:** ಈಶಾನ್ಯ ರಾಜ್ಯಗಳಲ್ಲಿ ಸೆಮಿ ಕಂಡಕ್ಟರ್ ಘಟಕದಂತಹ ದೊಡ್ಡ ಕೈಗಾರಿಕೆಗಳನ್ನು ಸ್ಥಾಪಿಸಲು ಯಾವುದೇ ಪ್ರತಿಭೆ ಇಲ್ಲ ಎಂಬ ಹೇಳಿಕೆ ನೀಡಿದ್ದಕ್ಕಾಗಿ ಐಟಿ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಪ್ರಕರಣ ದಾಖಲಿಸುವ ಬಗ್ಗೆ ತಮ್ಮ ಸರ್ಕಾರ ಚಿಂತನೆ ನಡೆಸುತ್ತಿದೆಯೆಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರು ಹೇಳಿದ್ದಾರೆ.

## ಸಿಎಂ ಹೇಳಿದ ಮೇಲೆ ಇನ್ನೇನಿದೆ: ಡಿಕೆಶಿ

• ಪ್ರಜೋದಯ ವರದಿ



**ಬೆಂಗಳೂರು:** ಕಾಂಗ್ರೆಸ್ ಹೈಕಮಾಂಡ್ ತೀರ್ಮಾನಿಸಿದರೆ ಪೂರ್ಣವಾಧಿ ನಾನೇ ಮುಖ್ಯ ಮಂತ್ರಿ ಎಂದು ಸಿದ್ದರಾಮಯ್ಯ ಅವರು ಹೇಳಿದ ಮೇಲೆ ಮುಗಿಯಿತು. ಅವರು ಹೇಳಿದ ಮೇಲೆ ಇನ್ನೇನಿದೆ ಅವರು ಹೇಗೆ ಹೇಳುತ್ತಾರೋ ಹಾಗೆ ನಾವು ಕೇಳುತ್ತೇ ವೆಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಸೋಮವಾರ ದೆಹಲಿಯಿಂದ ವಾಪಾಸ್ಸಾದ ಅವರು ದೇವನಹಳ್ಳಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಸುದ್ದಿಗಾರರೊಂದಿಗೆ ಮಾತನಾ ಡಿದ ಅವರು, ದೆಹಲಿ ಭೇಟಿ ಬಗ್ಗೆ ಪ್ರತಿಕ್ರಿಯಿಸಿ, ನಮ್ಮ ಪಕ್ಷದ ಕಾರ್ಯ ಕಾರಿ ಸಮಿತಿ ಸದಸ್ಯೆಯಾದ ಅಂಬಿಕಾ ಸೋನಿಯವರ ಮನೆಗೆ ಭೇಟಿ ನೀಡಿದ್ದೆ. ಅವರ ಪತಿ ತೀರಿಕೊಂಡಿದ್ದರು. ಹೀಗಾಗಿ ಸಂತಾಪ ಸೂಚಿಸಲು ಅವರ ಮನೆಗೆ ಭೇಟಿ ನೀಡಿದ್ದೆ. ನಾನು ತಿಹಾರ್ ಜೈಲಿನಲ್ಲಿದ್ದಾಗ ಅವರು ಸೋನಿಯ ಗಾಂಧಿ ಅವರ ಜೊತೆ ಬಂದು ನನ್ನನ್ನು ಭೇಟಿ ಮಾಡಿದ್ದರು. ನನಗೂ ಅವರಿಗೂ ಬಹಳ ಆತ್ಮೀಯತೆ. ನಮ್ಮ ಪಕ್ಷದ ನಾಯಕರು ಅವರು. ಎಸ್ ಎಂ ಕೃಷ್ಣ ಅವರು ಅಧಿಕಾರದಲ್ಲಿದ್ದಾಗ ನಮಗೆ ಪ್ರಧಾನಕಾರ್ಯದರ್ಶಿಯಾಗಿದ್ದರು. ನನ್ನನ್ನು ತಮ್ಮನಂತೆ ಕಂಡಿದ್ದರು, ನನ್ನ ಕೆಲಸಗಳಿಗೆ ಪ್ರೋತ್ಸಾಹ ನೀಡುತ್ತಿದ್ದರು.ಹಾಗಾಗಿ ನಾನು ಅವರ ಮನೆಗೆ ಭೇಟಿ ನೀಡಿದ್ದೆ ಎಂದು ತಿಳಿಸಿದರು.

**ಏನು ಬೇಕಾದರೂ ಚರ್ಚೆ ಮಾಡಿಕೊಳ್ಳಿ**

ಹೈಕಮಾಂಡ್ ಭೇಟಿಗೆ ದೆಹಲಿಗೆ ಹೋಗಿದ್ದಿರಿ ಎಂದು ಚರ್ಚೆಯಾಗುತ್ತಿದೆ ಎಂಬ ಪ್ರಶ್ನೆಗೆ ಉತ್ತರಿಸಿದರ ಅವರು, ನಾನು ದಿಲ್ಲಿಗೆ ಹೋಗಿದ್ದ ವಿಷಯ, ಕೆಲಸದ ಬಗ್ಗೆ ಮಾತ್ರ ಹೇಳಬಲ್ಲೆ. ಹೈಕಮಾಂಡ್ ಭೇಟಿ ಬಗ್ಗೆ ನೀವು ಮಾಧ್ಯಮದವರು, ಸಾರ್ವಜನಿಕರು, ಇನ್ನೂ ಬೇರೆಯವರು ಏನು ಬೇಕಾ ದರೂ ಚರ್ಚೆ ಮಾಡಿಕೊಳ್ಳಿ. ಯಾರು ಬೇಕಾದರೂ ಮಾತಾಡಿಕೊಳ್ಳಲಿ. ನನಗದು ಸಂಬಂಧ ಪಡದ ವಿಷಯ ಎಂದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019